# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 93 Issue: | ರಾಯಚೂರು Raichur | 25-09-2026 | ಶುಕ್ರವಾರ Friday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685


T20 ವಿಶ್ವಕಪ್ ಗೆಲ್ಲಲು 17 ವರ್ಷ ಕಾಯಲಿಲ್ಲ... ಟೀಕಾಕಾರರ ವಿರುದ್ಧ ಗೌತಮ್ ಗಂಭೀರ್ ಗರಂ!



## ಹೋಟೆಲ್‌ಗಳ ಮೇಲೆ ದಿಢೀರ್ ದಾಳಿ, ಭಾರಿ ದಂಡ

### ಆಹಾರದ ಗುಣಮಟ್ಟದ ಮೇಲೆ ಅಧಿಕಾರಿಗಳ ಹದ್ದಿನ ಕಣ್ಣು

ರಾಯಚೂರು: ಹೋಟೆಲ್, ದಾಬಾ ಹಾಗೂ ರೆಸ್ಟೋರೆಂಟ್‌ಗಳಲ್ಲಿ ಆಹಾರದ ಗುಣಮಟ್ಟ ಮತ್ತು ಸುರಕ್ಷತೆ ಕುರಿತು ಸಾರ್ವಜನಿಕರಿಂದ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಅಧಿಕಾರಿಗಳು ಜಿಲ್ಲೆಯಲ್ಲಿ ದಿಢೀರ್ ತಪಾಸಣೆ ನಡೆಸಿದ್ದು, ನಿಯಮ ಉಲ್ಲಂಘಿಸಿದ ಹಲವು ಆಹಾರ ಮಳಿಗೆಗಳ ವಿರುದ್ಧ ಕ್ರಮ ಕೈಗೊಂಡಿದ್ದಾರೆ.

ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಮೂರು ದಿನಗಳ ಕಾಲ ವಿಶೇಷ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು, ಜಿಲ್ಲೆಯ ಒಟ್ಟು 103 ಸ್ಥಳಗಳಿಗೆ ಭೇಟಿ ನೀಡಿ ಆಹಾರ ತಯಾರಿಕೆ, ಸಂಗ್ರಹಣೆ ಹಾಗೂ ಸ್ವಚ್ಛತಾ ವ್ಯವಸ್ಥೆಯನ್ನು ಪರಿಶೀಲಿಸಿದ್ದಾರೆ.

ಪರಿಶೀಲನೆ ವೇಳೆ ಕೆಲವು ಹೋಟೆಲ್, ದಾಬಾ ಮತ್ತು ರೆಸ್ಟೋರೆಂಟ್‌ಗಳಲ್ಲಿ ಸ್ವಚ್ಛತೆಯ ಕೊರತೆ, ನಿಷೇಧಿತ ಪದಾರ್ಥಗಳ ಬಳಕೆ, ಒಮ್ಮೆ ಬಳಸಿದ ಅಡುಗೆ ಎಣ್ಣೆಯನ್ನು ಮರುಬಳಕೆ ಮಾಡಿರುವುದು ಸೇರಿದಂತೆ ವಿವಿಧ ಆಹಾರ ಸುರಕ್ಷತಾ ನಿಯಮಗಳ



ಉಲ್ಲಂಘನೆ ಬೆಳಕಿಗೆ ಬಂದಿದೆ. ಸಂಬಂಧಪಟ್ಟ ಮಾಲೀಕರಿಗೆ ದಂಡ ವಿಧಿಸುವುದರ ಜೊತೆಗೆ ನೋಟಿಸ್ ಜಾರಿ ಮಾಡಿ, ಇಂತಹ ಲೋಪಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಗಿದೆ.

60 ಕಡೆ ಮೊದಲ ತಂಡದ

2ನೇ ಪುಟಕ್ಕೆ

## ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ರಾಹುಲ್ ಗಾಂಧಿ ಆಗ್ರಹ

ನವದೆಹಲಿ: ದೇಶದ ಚುನಾವಣಾ ವ್ಯವಸ್ಥೆಯಲ್ಲಿ ಅಕ್ರಮಗಳು ನಡೆಯುತ್ತಿವೆ ಎಂದು ಗಂಭೀರ ಆರೋಪ ಮಾಡಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಜ್ಞಾನೇಶ್ ಕುಮಾರ್ ವಿರುದ್ಧವೂ ಅವರು ತೀವ್ರ ಆರೋಪಗಳನ್ನು ಮಾಡಿದ್ದಾರೆ.

ಇಂದಿರಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಹುಲ್ ಗಾಂಧಿ, ಭಾರತೀಯ ಚುನಾವಣೆಗಳು, 2024ರ ಲೋಕಸಭಾ ಚುನಾವಣೆ ಹಾಗೂ ವಿಧಾನಸಭಾ ಚುನಾವಣೆಗಳಲ್ಲಿ ಅಕ್ರಮ ನಡೆದಿದೆ




ಎಂಬುದಕ್ಕೆ ತಮ್ಮ ಬಳಿ ಸಾಕಷ್ಟು ಮಾಹಿತಿ ಇದೆ ಎಂದು ಪ್ರತಿಪಾದಿಸಿದರು. ಮತದಾನದ ವ್ಯವಸ್ಥೆ ದುರ್ಬಲಗೊಂಡರೆ ಸಂವಿಧಾನ, ಕಾನೂನು ಮತ್ತು ಪ್ರಜಾಪ್ರಭುತ್ವ ಸಂಸ್ಥೆಗಳ ಮೇಲೂ ಪರಿಣಾಮ ಬೀರುತ್ತದೆ ಎಂದು ಹೇಳಿದರು. ಇವು ರಾಹುಲ್ ಗಾಂಧಿ ಮಾಡಿರುವ ಆರೋಪಗಳಾಗಿವೆ.

ಈ ಹೇಳಿಕೆಗೆ ಹಿನ್ನೆಲೆಯಾಗಿ, ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಕಳೆದ 10 ತಿಂಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR), ಹೊಸ ಮತದಾರರ ಸೇರ್ಪಡೆ, ಹೆಸರುಗಳ ಅಳಿಸುವಿಕೆ ಹಾಗೂ ಮತದಾರರ ದತ್ತಾಂಶ ನಿರ್ವಹಣೆ ಸೇರಿದಂತೆ ಹಲವು ವಿಷಯಗಳಲ್ಲಿ ಕನಿಷ್ಠ 14 ಬಾರಿ ಲಿಖಿತ ಆಕ್ಷೇಪ ದಾಖಲಿಸಿದ್ದರು ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ತನಿಖಾ ವರದಿ ತಿಳಿಸಿದೆ.

ಸುದ್ದಿಗೋಷ್ಠಿಯಲ್ಲಿ ಪ್ರಧಾನಿ ಮೋದಿ ಹಾಗೂ ಅಮಿತ್ ಶಾ ಅವರ ಹಿಂದಿನ ಭಾಷಣಗಳ ವೀಡಿಯೊಗಳನ್ನು ಪ್ರದರ್ಶಿಸಿದ ರಾಹುಲ್ ಗಾಂಧಿ, ಸಾಮಾನ್ಯವಾಗಿ ಪ್ರಜಾಪ್ರಭುತ್ವದಲ್ಲಿ ಅಧಿಕಾರದಲ್ಲಿರುವ ಸರ್ಕಾರಗಳು ಎದುರಿಸುವ ಆಡಳಿತ ವಿರೋಧಿ ಅಲೆ ಬಿಜೆಪಿಯ ವಿಷಯದಲ್ಲಿ ಏಕೆ ಕಾಣುತ್ತಿಲ್ಲ ಎಂದು ಪ್ರಶ್ನಿಸಿದರು. ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಅವಧಿಯನ್ನು ಉದಾಹರಿಸಿ, ಜನಪ್ರಿಯ ನಾಯಕರೂ ಕಾಲಕ್ರಮೇಣ ಆಡಳಿತ ವಿರೋಧಿ ಒತ್ತಡ ಎದುರಿಸುತ್ತಾರೆ ಎಂದು ಹೇಳಿದರು.

2ನೇ ಪುಟಕ್ಕೆ

## ಬುಲೆರೋ ಡಿಕ್ಕಿ: ಇಬ್ಬರು ಸಾವು, ಪರಿಹಾರಕ್ಕೆ ಆಗ್ರಹಿಸಿ ಹೆದ್ದಾರಿ ತಡೆ

ದೇವದುರ್ಗ: ತಾಲೂಕಿನ ಜಾಲಹಳ್ಳಿ ಪಟ್ಟಣದ ಜೆ.ಜೆ. ಕಲ್ಯಾಣ ಮಂಟಪದ ಸಮೀಪದ ರಾಜ್ಯ ಹೆದ್ದಾರಿಯಲ್ಲಿ ಬುಧವಾರ ರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟಿದ್ದು, ಮತ್ತಿಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಬುಲೆರೋ ವಾಹನ ಡಿಕ್ಕಿ ಹೊಡೆದ ಪರಿಣಾಮ ಹೊಸೂರು ಸಿದ್ದಾಪುರ ಗ್ರಾಮದ ನಿಂಗಯ್ಯ (29) ಹಾಗೂ ಜಾಲಹಳ್ಳಿ ಗೋಪಾಳಪುರದ ಹನುಮಯ್ಯ (48) ಮೃತಪಟ್ಟಿದ್ದಾರೆ. ಗಾಯಗೊಂಡ ಇಬ್ಬರನ್ನು ಹೆಚ್ಚಿನ ಚಿಕಿತ್ಸೆಗಾಗಿ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಜಲಧಾರೆ ಯೋಜನೆ (ಜೆಜೆಎಂ) ಅಡಿಯಲ್ಲಿ ಮುಖ್ಯರಸ್ತೆ ಪಕ್ಕದಲ್ಲಿ ನಡೆಯುತ್ತಿರುವ ಕಾಮಗಾರಿ ಪ್ರದೇಶದಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳದಿರುವುದೇ ಅಪಘಾತಕ್ಕೆ ಕಾರಣ ಎಂದು ಆರೋಪಿಸಿ ಮೃತರ ಸಂಬಂಧಿಕರು,



ಸಾರ್ವಜನಿಕರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಗುರುವಾರ ರಾಜ್ಯ ಹೆದ್ದಾರಿಯಲ್ಲಿ ಕುಳಿತು ಪ್ರತಿಭಟನೆ ನಡೆಸಿದರು.

ಕಾಮಗಾರಿ ನಡೆಯುತ್ತಿರುವ ಪ್ರದೇಶದಲ್ಲಿ ಸೂಚನಾ ಫಲಕ, ಬ್ಯಾರಿಕೇಡ್ ಹಾಗೂ ಇತರ ಸುರಕ್ಷತಾ ವ್ಯವಸ್ಥೆಗಳನ್ನು ಅಳವಡಿಸದೆ ರಸ್ತೆ ಬದಿಯಲ್ಲಿ ಗುಂಡಿಗಳನ್ನು ತೆರೆದಿರುವುದರಿಂದ ವಾಹನ ಸವಾರರು ಮತ್ತು ಪಾದಚಾರಿಗಳಿಗೆ ಅಪಾಯ ಎದುರಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ರಾತ್ರಿ ವೇಳೆ ಕಾಮಗಾರಿ ಸ್ಥಳ ಸ್ಪಷ್ಟವಾಗಿ ಕಾಣದಿರುವುದರಿಂದ ಅಪಘಾತಗಳ ಸಾಧ್ಯತೆ ಹೆಚ್ಚಾಗಿದೆ. ಸುರಕ್ಷತಾ ಕ್ರಮಗಳನ್ನು ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿದ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತಲಾ ₹10 ಲಕ್ಷ ಪರಿಹಾರ ನೀಡಬೇಕು ಹಾಗೂ ಕಾಮಗಾರಿಯಲ್ಲಿ ನಿರ್ಲಕ್ಷ್ಯ ವಹಿಸಿದವರ ವಿರುದ್ಧ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯ ಹಿನ್ನೆಲೆಯಲ್ಲಿ ಮೃತದೇಹಗಳನ್ನು ಆಸ್ಪತ್ರೆಯಿಂದ ತೆಗೆದುಕೊಂಡು ಹೋಗದೆ ಸಂಬಂಧಿಕರು ಹೆದ್ದಾರಿಯಲ್ಲಿ ಪ್ರತಿಭಟನೆ ಮುಂದುವರಿಸಿದರು. ಇದರಿಂದ ಕೆಲಕಾಲ ವಾಹನ ಸಂಚಾರಕ್ಕೆ ಅಡಚಣೆ ಉಂಟಾಯಿತು. ಪ್ರತಿಭಟನೆಯನ್ನು ಉದ್ದೇಶಿಸಿ ನರಸಣ್ಣ ನಾಯಕ ಹಾಗೂ ವಕೀಲ ಬಸನಗೌಡ ದೇಸಾಯಿ ಮಾತನಾಡಿ, ಮೃತರ ಕುಟುಂಬಗಳಿಗೆ ನ್ಯಾಯ ಮತ್ತು ಸೂಕ್ತ ಪರಿಹಾರ ನೀಡುವಂತೆ ಒತ್ತಾಯಿಸಿದರು.

ಸ್ಥಳಕ್ಕೆ ತಾಲೂಕು ಆಡಳಿತ, ಜಲಧಾರೆ ಯೋಜನೆಯ ಅಧಿಕಾರಿಗಳು ಹಾಗೂ ಪೊಲೀಸರು ಭೇಟಿ ನೀಡಿ ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು. ಮೃತರ ಕುಟುಂಬಗಳಿಗೆ ಪರಿಹಾರ ನೀಡುವ ಕುರಿತು ಹಾಗೂ ಕಾಮಗಾರಿ ಸ್ಥಳದಲ್ಲಿ ಅಗತ್ಯ

2ನೇ ಪುಟಕ್ಕೆ

## ತುಂಗಭದ್ರಾ ನದಿ ಹರಿವು ಹೆಚ್ಚಳ: ಭಕ್ತರ ಸುರಕ್ಷತೆಗೆ ಶ್ರೀಮಠದಿಂದ ಮುನ್ನೆಚ್ಚರಿಕೆ

ಮಂತ್ರಾಲಯ: ಮಂತ್ರಾಲಯದಲ್ಲಿ ತುಂಗಭದ್ರಾ ನದಿಯ ನೀರಿನ ಹರಿವು ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಭಕ್ತರ ಸುರಕ್ಷತೆಯ ದೃಷ್ಟಿಯಿಂದ ಶ್ರೀ ರಾಘವೇಂದ್ರ ಸ್ವಾಮಿ ಮಠದ ಆಡಳಿತ ಮಂಡಳಿ ಅಗತ್ಯ ಮುನ್ನೆಚ್ಚರಿಕೆ ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಂಡಿದೆ.



ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿ ಮಠದ ವ್ಯವಸ್ಥಾಪಕ ಎಸ್.ಕೆ. ಶ್ರೀನಿವಾಸ ರಾವ್ ಅವರ ಉಪಸ್ಥಿತಿಯಲ್ಲಿ ನದಿ ತೀರದ ಸುರಕ್ಷತಾ ವ್ಯವಸ್ಥೆಗಳನ್ನು ಬಿಗಿಗೊಳಿಸಲಾಗಿದ್ದು, ಹೆಚ್ಚಿನ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ತುಂಗಭದ್ರಾ ನದಿಯಲ್ಲಿ ನೀರಿನ ಹರಿವು ಹೆಚ್ಚಿರುವುದರಿಂದ ಭಕ್ತರು ನದಿ ತೀರದ ಸಮೀಪ ತೆರಳದಂತೆ ಹಾಗೂ ಯಾವುದೇ ಕಾರಣಕ್ಕೂ ನದಿಯ ನೀರಿಗೆ ಇಳಿಯದಂತೆ ಕಟ್ಟುನಿಟ್ಟಾಗಿ ಸೂಚಿಸಲಾಗುತ್ತಿದೆ. ನದಿ ತೀರದ ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತಾ ಸಿಬ್ಬಂದಿ ನಿರಂತರ ನಿಗಾ ವಹಿಸಿದ್ದು, ಭಕ್ತರು ಸುರಕ್ಷಿತ ಪ್ರದೇಶಗಳಲ್ಲಿಯೇ ಇರುವಂತೆ ಮಾರ್ಗದರ್ಶನ ನೀಡುತ್ತಿದ್ದಾರೆ.

ನದಿಯಲ್ಲಿನ ಹೆಚ್ಚಿದ ನೀರಿನ ಹರಿವಿನ ಕುರಿತು ಭಕ್ತರು ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡಲು ಶ್ರೀಮಠದ ವತಿಯಿಂದ ಧ್ವನಿವರ್ಧಕಗಳ ಮೂಲಕ ನಿರಂತರವಾಗಿ ಎಚ್ಚರಿಕೆ ಸಂದೇಶಗಳನ್ನು ಪ್ರಸಾರ ಮಾಡಲಾಗುತ್ತಿದೆ. ನದಿ ತೀರದಲ್ಲಿ ಅನಗತ್ಯವಾಗಿ ಓಡಾಡದಂತೆ ಹಾಗೂ ಸುರಕ್ಷತಾ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಮನವಿ ಮಾಡಲಾಗುತ್ತಿದೆ.

ಮಂತ್ರಾಲಯಕ್ಕೆ ಆಗಮಿಸುವ

2ನೇ ಪುಟಕ್ಕೆ

## ದಿವಾಳಿ ಸರ್ಕಾರದ ಶವಯಾತ್ರೆ: ಬಿಜೆಪಿ ಪ್ರತಿಭಟನೆ

ರಾಯಚೂರು: ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಆರ್ಥಿಕ ನಿರ್ವಹಣೆ, ಆಡಳಿತ ವೈಫಲ್ಯ ಹಾಗೂ ಜನವಿರೋಧಿ ನೀತಿಗಳನ್ನು ಖಂಡಿಸಿ ಭಾರತೀಯ ಜನತಾ ಪಕ್ಷದ ಜಿಲ್ಲಾ ಘಟಕದ ವತಿಯಿಂದ ಗುರುವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ದಿವಾಳಿ ಸರ್ಕಾರದ ಶವಯಾತ್ರೆ ಹೆಸರಿನಲ್ಲಿ ಪ್ರತಿಭಟನೆ ನಡೆಸಲಾಯಿತು.

ರಾಜ್ಯ ಬಿಜೆಪಿ ಕರೆ ನೀಡಿದ್ದ ರಾಜ್ಯವ್ಯಾಪಿ ಪ್ರತಿಭಟನೆಯ ಭಾಗವಾಗಿ ಆಯೋಜಿಸಿದ್ದ ಹೋರಾಟದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಸರ್ಕಾರದ ಆರ್ಥಿಕ ಪರಿಸ್ಥಿತಿ ಹಾಗೂ ಆಡಳಿತದ ಕುರಿತು ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು,






ಅಣಕು ಶವಯಾತ್ರೆ ನಡೆಸುವ ಮೂಲಕ ವಿನೂತನವಾಗಿ ವಿರೋಧ ದಾಖಲಿಸಿದರು.

ಪ್ರತಿಭಟನೆ ವೇಳೆ ಸರ್ಕಾರದ ಪ್ರತಿಕೃತಿಯೊಂದಿಗೆ ಶವಯಾತ್ರೆಯ ಮಾದರಿಯಲ್ಲಿ ಪ್ರದರ್ಶನ ನಡೆಸಿದ ಕಾರ್ಯಕರ್ತರು, ಶೋಕಾಚರಣೆಯ ಮಾದರಿಯಲ್ಲಿ ಬೊಬ್ಬೆ ಹಾಕುತ್ತಾ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಅಂಬೇಡ್ಕರ್ ವೃತ್ತದಲ್ಲಿ ಕೆಲಕಾಲ ಪ್ರತಿಭಟನೆಯ ಕಾವು ಕಂಡುಬಂದಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡರು, ರಾಜ್ಯ ಸರ್ಕಾರದ ಆರ್ಥಿಕ ನಿರ್ವಹಣೆಯಲ್ಲಿ ವೈಫಲ್ಯ ಉಂಟಾಗಿದ್ದು, ಅದರ ಪರಿಣಾಮ ಅಭಿವೃದ್ಧಿ ಕಾಮಗಾರಿಗಳು ಹಾಗೂ ಸಾರ್ವಜನಿಕರಿಗೆ ಸಂಬಂಧಿಸಿದ ವಿವಿಧ ಯೋಜನೆಗಳ ಮೇಲೆ ಬೀಳುತ್ತಿದೆ ಎಂದು ಆರೋಪಿಸಿದರು. ಸರ್ಕಾರ ಜನರ ನಿರೀಕ್ಷೆಗೆ ತಕ್ಕಂತೆ ಕಾರ್ಯನಿರ್ವಹಿಸುತ್ತಿಲ್ಲ ಹಾಗೂ ಸಾರ್ವಜನಿಕ ಸಮಸ್ಯೆಗಳಿಗೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂದು ದೂರಿದರು.

ರಾಜ್ಯದ ಆರ್ಥಿಕ ಸ್ಥಿತಿಯ ಕುರಿತು ಬಿಜೆಪಿ ರಾಜ್ಯ ನಾಯಕತ್ವವೂ ಪ್ರಶ್ನೆಗಳನ್ನು ಎತ್ತಿದ್ದು, ವಿವಿಧ ಕ್ಷೇತ್ರಗಳ

2ನೇ ಪುಟಕ್ಕೆ

## ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಿ: ನ್ಯಾ.ಸಿದ್ದರಾಮಪ್ಪ

ರಾಯಚೂರು ಸೆಪ್ಟಂಬರ್ 24 (ಕರ್ನಾಟಕ ವಾರ್ತೆ): ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಮಹಿಳೆಯರಿಗೆ, ವಿದ್ಯಾರ್ಥಿಗಳಿಗೆ ಹಾಗೂ ವೃದ್ಧರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿವೆ. ಅರ್ಹ ಫಲಾನುಭವಿಗಳು ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಹೇಳಿದರು.



ಸೆಪ್ಟಂಬರ್ 22ರ ಬುಧವಾರ ದಂದು ರಾಯಚೂರು ತಾಲೂಕಿನ ಮಟಮಾರಿ ಗ್ರಾಮದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಸಂಯೋಗದಲ್ಲಿ ಮೆಗಾ ಡ್ರೇವ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿಯೊಬ್ಬರು ಕಾನೂನುಗಳನ್ನು ಅರಿತುಕೊಳ್ಳಬೇಕು. ಮಹಿಳೆಯರಿಗಾಗಿ ಆನೇಕ ಕಾನೂನುಗಳಿವೆ ಅವುಗಳನ್ನು ಸರಿಯಾಗಿ ಅಧ್ಯಯನ ಮಾಡಬೇಕೆಂದರು.

ರಾಯಚೂರು ತಾಲ್ಲೂಕಿನ ಮಟಮಾರಿ ಗ್ರಾಮವನ್ನು ಎನ್‌ಎಲ್‌ಎಸ್‌ಎ ಯೋಜನೆಯಡಿ ಆಯ್ಕೆ ಮಾಡಿಕೊಂಡಿದ್ದು, ಈಗಾಗಲೇ ಮಟಮಾರಿ ಗ್ರಾಮದ ಜನರಿಗೆ ಯೋಜನೆಗಳಲ್ಲಿ ಸಂಬಧಪಟ್ಟ ಇಲಾಖೆಗಳ ಮುಖಾಂತರ ಸರ್ವೆ ಮಾಡಿದ ಪಲಾನುಭವಿಗಳಿಗೆ 171 ಆಯುಷ್ಯ ಮಾನ್ ಭಾರತ್ ಕಾರ್ಡ್, 36 ವೃದ್ಧಾಪ್ಯ ವೇತನ, 4 ಆಧಾರ್ ಕಾರ್ಡ್, 21 ವಿಧವಾ ವೇತನ, 61 ಕಾರ್ಮಿಕ ಕಾರ್ಡ್, 38 ವಾಹನ ಚಾಲನೆ ಕಲಿಕಾ

2ನೇ ಪುಟಕ್ಕೆ






## ಪತ್ರಕರ್ತರ ಒತ್ತಡದ ಬದುಕಿನಲ್ಲಿ ಕ್ರೀಡೆ ಅಗತ್ಯ: ಡಾ. ಸುರೇಶ ಜಿ

ರಾಯಚೂರು, ಸೆ.24: ಪತ್ರಕರ್ತರು ದಿನನಿತ್ಯದ ಒತ್ತಡದ ವೃತ್ತಿಜೀವನದ ನಡುವೆ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದು ಅಗತ್ಯ ಎಂದು ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಡಾ. ಸುರೇಶ ಜಿ ಹೇಳಿದರು.



ನಗರದ ಮಹಾತ್ಮ ಗಾಂಧಿ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಗುರುವಾರ ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಪತ್ರಕರ್ತರಿಗಾಗಿ ಆಯೋಜಿಸಲಾಗಿದ್ದ ಶಟಲ್ ಬ್ಯಾಡ್ಮಿಂಟನ್ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವದ ಪ್ರಯುಕ್ತ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳ ಜೊತೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿರುವುದು ಶ್ಲಾಘನೀಯ. ಇದರೊಂದಿಗೆ ಪತ್ರಕರ್ತರಿಗಾಗಿ ಕ್ರೀಡಾಕೂಟಗಳನ್ನು ಹಮ್ಮಿಕೊಂಡಿರುವುದು ಮತ್ತಷ್ಟು ಅರ್ಥಪೂರ್ಣವಾಗಿದೆ ಎಂದರು.

ಪತ್ರಕರ್ತರು ನಿರಂತರವಾಗಿ ಸುದ್ದಿ ಸಂಗ್ರಹ, ವರದಿ, ಸಭೆ-ಸಮಾರಂಭಗಳ ವರದಿ ಹಾಗೂ ವಿವಿಧ ಒತ್ತಡಗಳ ನಡುವೆ ಕಾರ್ಯನಿರ್ವಹಿಸುತ್ತಾರೆ. ಇಂತಹ ವೃತ್ತಿಪರ ಒತ್ತಡದ ನಡುವೆ ಕ್ರೀಡೆಗೆ ಸಮಯ ಮೀಸಲಿಡುವುದರಿಂದ ದೈಹಿಕ ಚುರುಕುತನದ ಜೊತೆಗೆ ಮಾನಸಿಕ ನೆಮ್ಮದಿಯೂ ದೊರೆಯುತ್ತದೆ ಎಂದು ಹೇಳಿದರು.

ಕ್ರೀಡಾ ಮತ್ತು ಯುವಜನ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಈರೇಶ ನಾಯಕ್ ಮಾತನಾಡಿ, ಕ್ರೀಡೆಯನ್ನು ಕೇವಲ ವಿಶೇಷ ಸಂದರ್ಭಗಳಿಗೆ ಮಾತ್ರ ಸೀಮಿತಗೊಳಿಸದೆ ಪ್ರತಿದಿನದ ಜೀವನದ ಭಾಗವಾಗಿಸಿಕೊಳ್ಳಬೇಕು. ನಿಯಮಿತವಾಗಿ ಕ್ರೀಡೆಯಲ್ಲಿ

2ನೇ ಪುಟಕ್ಕೆ

# ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 24 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು ಇವರ ಸಹಯೋಗದೊಂದಿಗೆ 2026-27ನೇ ಸಾಲಿನಲ್ಲಿ ನಿರುದ್ಯೋಗಿ ಮಹಿಳೆಯರಿಗೆ ಹಾಗೂ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಲ್ಲಿ ಆರ್ಥಿಕ ನೆರವನ್ನು ನೀಡಲಾಗುತ್ತಿದ್ದು, ಅರ್ಹ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಉದ್ಯೋಗಿನಿ ಯೋಜನೆಯಡಿ 21-55 ವಯೋಮಿತಿಯೊಳಗಿರುವ ಆರ್ಥಿಕವಾಗಿ ಹಿಂದುಳಿದ ಮತ್ತು ಸಾಮಾನ್ಯ ಮಹಿಳೆಯರು ಯಾವುದಾದರೂ ಲಾಭದಾಯಕ ಚಟುವಟಿಕೆಯಲ್ಲಿ ಸ್ವಂತ ಉದ್ಯೋಗವನ್ನು ಕೈಗೊಳ್ಳಲು ಬ್ಯಾಂಕಿನಿದ ಗರಿಷ್ಠ 3.0 ಲಕ್ಷ ರೂ. ಗಳವರೆಗೆ ಸಾಲ ಹಾಗೂ ಸಾಮಾನ್ಯ ವರ್ಗದ ಮಹಿಳೆಯರಿಗೆ, ವಿಧವೆ, ಅಂಗವಿಕಲರು ಹಾಗೂ ಸಂಕಷ್ಠ ಮಹಿಳೆಯರಿಗೆ ಗರಿಷ್ಠ 90,000/- ರೂ. ಅಥವಾ ಶೇ.30 ರಷ್ಟು ಗಳವರೆಗೆ ಸಹಾಯಧನ ನೀಡಲಾಗುತ್ತದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮಹಿಳೆಯರಿಗೆ ಗರಿಷ್ಟ ಶೇ.50 ರಷ್ಟು ಗಳವರೆಗೆ ಸಹಾಯಧನವನ್ನು ನೀಡಲಾಗುವುದು.

ಧನಶ್ರೀ, ಚೇತನ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಮಾಜಿ ದೇವದಾಸಿ ಪುನರ್ವಸತಿ ಯೋಜನೆಗಳಲ್ಲಿ 20-55 ವಯೋಮಿತಿಗೊಳಗಿರುವ ಸಂಸ್ಥೆಯಲ್ಲಿ ನೋಂದಣಿಯಾಗಿರುವ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಯಾವುದಾದರೂ ಲಾಭದಾಯಕ ಚಟುವಟಿಕೆಯಲ್ಲಿ ಸ್ವಂತ ಉದ್ಯೋಗವನ್ನು ಕೈಗೊಳ್ಳಲು ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ನಿಗಮದಿಂದ ನೇರವಾಗಿ 45,000/- ರೂ. ಸಹಾಯಧನವನ್ನು ಡಿ.ಬಿ.ಟಿ ಮೂಲಕ ಅವರ ಖಾತೆಗೆ ಜಮೆ ಮಾಡಲಾಗುತ್ತದೆ.

ದಾಖಲೆಗಳು: ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಮಹಿಳೆಯರಿಗೆ ಆದಾಯ ಮಿತಿ ರೂ. 2.40 ಲಕ್ಷ ಇರಬೇಕು ಹಾಗೂ ಇತರೇ ವರ್ಗದ ಮಹಿಳೆಯರಿಗೆ ಆದಾಯ ಮಿತಿ ರೂ. 1.75 ಲಕ್ಷ ಇರಬೇಕು. ವಿಧವೆ, ಅಂಗವಿಕಲರು, ಸಂಕಷ್ಠಗೊಳಗಾದ ಮಹಿಳೆಯರು ಪ್ರಮಾಣ ಪತ್ರ ಲಗತ್ತಿಸುವುದು. ಯೋಜನಾ ವರದಿ ಹಾಗೂ ಚಾಲ್ತಿಯಲ್ಲಿರುವ ಬ್ಯಾಂಕ್ ಪಾಸ್ ಪುಸ್ತಕದ ಮುಖಪುಟ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಪ್ರತಿ. ಚೇತನ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಯಡಿ ಸಂಬಧಿಸಿದ ಸಿ.ಬಿ.ಒ ಕಡೆಯಿಂದ ಪತ್ರ ಎ.ಆರ್.ಟಿ ಪತ್ರ ಸ್ವಯಂ ಘೋಷಣೆ ಸಲ್ಲಿಸುವುದು. ವಿವೇಚನ ಕೋಟಾದಡಿ ಸೌಲಭ್ಯ ಪಡೆಯಲು ಇಚ್ಛಿಸುವ ಅರ್ಜಿದಾರರು ಮಾನ್ಯ ಸಚಿವರು/ಮಾನ್ಯ ಶಾಸಕರು/ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರು ಇವರ ಶಿಫಾರಸ್ಸು ಪತ್ರದೊಂದಿಗೆ ಅರ್ಜಿ ಸಲ್ಲಿಸುವುದು.

ಉದ್ಯೋಗಿನಿ ಯೋಜನೆ ಅರ್ಜಿದಾರರು 21 ರಿಂದ 55 ವರ್ಷದೊಳಗಿರಬೇಕು. ಧನಶ್ರೀ, ಚೇತನ ಲಿಂಗತ್ವ ಅಲ್ಪಸಂಖ್ಯಾತರು ಮಾಜಿ ದೇವದಾಸಿ ಮಹಿಳೆಯರು ಪನರ್ವಸತಿ ಯೋಜನೆ ಅರ್ಜಿದಾರರು 20 ರಿಂದ 55 ವರ್ಷದೊಳಗಿರಬೇಕು. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು ಕನಿಷ್ಠ 05 ವರ್ಷದಿಂದ ಕರ್ನಾಟಕ ರಾಜ್ಯದಲ್ಲೇ ಖಾಯಂ ನಿವಾಸಿಯಾಗಿರಬೇಕು. ಸಕ್ಷಮ ಪ್ರಾಧಿಕಾರದ ವಾಸಸ್ಥಳ ದೃಢೀಕರಣ ಪತ್ರ ಒದಗಿಸತಕ್ಕದ್ದು. ಅರ್ಜಿದಾರರು ರಾಷ್ಟ್ರೀಕೃತ ಬ್ಯಾಂಕ್ ಖಾತೆಯನ್ನು ಹೊಂದಿದ್ದು ಚಾಲ್ತಿಯಲ್ಲಿರಬೇಕು. ಈ ಹಿಂದೆ ಕಳೆದ 10 ವರ್ಷಗಳಲ್ಲಿ ನಿಗಮದಿಂದ ಉದ್ಯೋಗಿನಿ ಯೋಜನೆಯಡಿಯಲ್ಲಿ ಸೌಲಭ್ಯ ಪಡೆದಿರಬಾರದು. ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಅರ್ಜಿಯ ಜೊತೆಗೆ ಕಡ್ಡಾಯವಾಗಿ ಈ ಕೆಳಕಂಡ ವಿವರಗಳು/ದಾಖಲಾತಿಗಳನ್ನು ಸಲ್ಲಿಸಬೇಕು. ವಿಳಾಸ ದೃಢೀಕರಣ ದಾಖಲೆಗಳು (ಮತದಾರರ ಗುರುತಿನ ಚೀಟಿ ಜೊತೆಗೆ ಆಧಾರ್ ಕಾರ್ಡ್/ಪಡಿತರ ಚೀಟಿ). ಬ್ಯಾಂಕ್ ಖಾತೆಯ ಪಾಸ್‌ಬುಂಕ್ ಪುಸ್ತಕದ ನಕಲು ಪ್ರತಿ (ರಾಷ್ಟ್ರೀಕೃತ ಬ್ಯಾಂಕಿನ ಹೆಸರು, ಖಾತೆ ಸಂಖ್ಯೆ ಐ.ಎಫ್.ಎಸ್.ಸಿ ಕೋಡ್ ಸ್ಪಷ್ಟವಾಗಿ ಕಾಣುವಂತಿರಬೇಕು) ಸಹಾಯಧನ ಪಡೆಯಲು ಉದ್ದೇಶಿಸಿದ ಆದಾಯ ಉತ್ಪನ್ನ ಚಟುವಟಿಕೆಯ ಯೋಜನಾ ವರದಿ (ನಿಗದಿತ ನಮೂನೆಯಲ್ಲಿ) ಲಿಂಗತ್ವ ಅಲ್ಪಸಂಖ್ಯಾತರಾಗಿದ್ದಲ್ಲಿ ಜಿಲ್ಲಾಧಿಕಾರಿಯವರಿಂದ ಪಡೆದ ಗುರುತಿನ ಚೀಟಿಯನ್ನು ಲಗತ್ತಿಸಬೇಕು. ಹೆಚ್.ಐ.ವಿ ಭಾದಿತ/ಸೋಂಕಿತ ಮಹಿಳೆಯರು ಕೆಎಸ್‌ಎಪಿಎಸ್ ಯಿಂದ ಪಡೆದ ಎಆರ್‌ಟಿ ಕಾರ್ಡ್ ಲಗತ್ತಿಸಬೇಕು. ದಮನಿತ ಮಹಿಳೆಯರಾಗಿದ್ದಲ್ಲಿ ಸಿಬಿಓ ಡ್ಯಾಪ್ಕೋನಿಂದ ಪಡೆದ ದೃಢೀಕರಣ ಪತ್ರವನ್ನು ಲಗತ್ತಿಸಬೇಕು. ಮಾಜಿ ದೇವದಾಸಿ ಪುನರ್ವಸತಿ ಯೋಜನೆ ಅರ್ಜಿದಾರರು ಯೋಜನಾಧಿಕಾರಿಗಳಿಂದ ಪಡೆದ ಮಾಜಿ ದೇವದಾಸಿ ಪ್ರಮಾಣ ಪತ್ರ ಲಗತ್ತಿಸಬೇಕು. ವಯಸ್ಸಿನ ದೃಢೀಕರಣಕ್ಕಾಗಿ ಜನನ ಪ್ರಮಾಣ ಪತ್ರ/ಶಾಲಾ ದೃಢೀಕರಣ ಪತ್ರದೊಂದಿಗೆ ಅಕ್ಟೋಬರ್ 31ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಅಮೃತ ವಾಣಿ**

ಪುಸ್ತಕಗಳು ನಮಗೆ ಪಾಠ ಕಲಿಸುವದರ ಜೊತೆಗೆ ಸ್ಪೂರ್ತಿ ನೀಡುತ್ತವೆ ಮತ್ತು ಮನುಷ್ಯರನ್ನಾಗಿ ಮಾಡುತ್ತವೆ.





# ಕ್ರೀಡಾಕೂಟದಲ್ಲಿ ಲೋಯೋಲಾ ಕಾಲೇಜಿನ ವಿದ್ಯಾರ್ಥಿಗಳ ಅಮೋಘ ಸಾಧನೆ



ಮಾನ್ವಿ: ಪಟ್ಟಣದ ಲೋಯೋಲಾ ಕಾಲೇಜು ಆವರಣದಲ್ಲಿ ನಡೆದ ಪದವಿ ಪೂರ್ವ ಕಾಲೇಜುಗಳ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ನಮ್ಮ ಮಾನ್ವಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಕ್ರೀಡಾ ವಿಭಾಗಗಳಲ್ಲಿ ಉತ್ತಮ ಪ್ರದರ್ಶನ ನೀಡಿ, ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಬಾಲಕರ ವಿಭಾಗದ 5,000 ಮೀಟರ್ ಓಟದಲ್ಲಿ ವೀರೇಶ ಕೊರವಿ ಪ್ರಥಮ ಸ್ಥಾನ, 400 ಮೀಟರ್ ಓಟದಲ್ಲಿ ಆದನಗೌಡ ಚಡಕಲಗುಡ್ಡ ಪ್ರಥಮ ಸ್ಥಾನ ಪಡೆದಿದ್ದಾರೆ. 100 ಮೀಟರ್ ಓಟ ಹಾಗೂ ಚಕ್ರ ಎಸೆತದಲ್ಲಿ ಅಯ್ಯನಗೌಡ ಚಡಕಲಗುಡ್ಡ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಬಾಲಕಿಯರ ವಿಭಾಗದ 100 ಮೀಟರ್ ಓಟದಲ್ಲಿ ಚಾಮುಂಡಿ ಉಮಳಿ ಹೊಸೂರು ದ್ವಿತೀಯ ಸ್ಥಾನ, 800 ಮೀಟರ್ ಓಟದಲ್ಲಿ ಭಾಗ್ಯಮ್ಮ ಉಮಳಿ ಹೊಸೂರು ತೃತೀಯ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ. ವಿಜೇತ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಇದಲ್ಲದೆ ಕಬಡ್ಡಿ, ಖೋ-ಖೋ ಹಾಗೂ ವಾಲಿಬಾಲ್ ಸೇರಿದಂತೆ ವಿವಿಧ ಗುಂಪು ಕ್ರೀಡೆಗಳಲ್ಲಿಯೂ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಗಮನ ಸೆಳೆದರು.

ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಅಧ್ಯಕ್ಷ ಎಚ್. ಮೌನೇಶಗೌಡ, ಪ್ರಾಚಾರ್ಯ ಕೃಷ್ಣ ವಧೂತ ಕಾತರಕಿ, ಉಪನ್ಯಾಸಕರಾದ ಅಂಬಣ್ಣ ನಾಯಕ ಉಮಳಿ ಹೊಸೂರು, ಹನುಮಂತ ಯಡಿವಾಳ, ಅಮರೇಶ ಮಾನ್ವಿ ಹಾಗೂ ಉಪನ್ಯಾಸಕಿಯರಾದ ತ್ರಿವೇಣಿ, ಸೌಂದರ್ಯ ಮತ್ತು ಜ್ಯೋತಿ ಅಭಿನಂದಿಸಿ, ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲಿ ಮತ್ತಷ್ಟು ಸಾಧನೆ ಮಾಡುವಂತೆ ಶುಭ ಹಾರೈಸಿದ್ದಾರೆ.

# ಕಲ್ಮಠ ಪಿಯು ಕಾಲೇಜಿನ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ



ಮಾನ್ವಿ: ಪಟ್ಟಣದಲ್ಲಿ ನಡೆದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಶ್ರೀ ಪಂಪಾ ವಿರೂಪಾಕ್ಷೇಶ್ವರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಕ್ರೀಡೆಗಳಲ್ಲಿ ಉತ್ತಮ ಸಾಧನೆ ಮಾಡಿ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಬಾಲಕರ ಗುಂಪು ಕ್ರೀಡೆಗಳಲ್ಲಿ ಕಾಲೇಜಿನ ತಂಡ ಥ್ರೋಬಾಲ್ ಹಾಗೂ ವಾಲಿಬಾಲ್‌ನಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಖೋ-ಖೋ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸಿದೆ.

ವೈಯಕ್ತಿಕ ವಿಭಾಗದಲ್ಲಿ ಮಲ್ಲು 100 ಮೀಟರ್ ಓಟ ಹಾಗೂ ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. 3000 ಮೀಟರ್ ಓಟದಲ್ಲಿ ಮಲ್ಲಯ್ಯ ಪ್ರಥಮ ಸ್ಥಾನ, 1500 ಮೀಟರ್ ಓಟದಲ್ಲಿ ದೇವರಾಜ ಪ್ರಥಮ ಹಾಗೂ ರವಿಕುಮಾರ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಬಾಲಕಿಯರ ರಿಂಗ್ ಬಾಲ್ ಸ್ಪರ್ಧೆಯಲ್ಲಿ ಕಾಲೇಜಿನ ವಿದ್ಯಾರ್ಥಿನಿಯರು ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಸಂಸ್ಥೆಯ ಅಧ್ಯಕ್ಷ ಶ್ರೀ ವಿರೂಪಾಕ್ಷ ಪಂಡಿತರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಅಭಿನಂದಿಸಿ, ಮುಂದಿನ ಹಂತದಲ್ಲಿ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದ್ದಾರೆ.

ಈ ಸಂದರ್ಭದಲ್ಲಿ ಕಾಲೇಜಿನ ಆಡಳಿತಾಧಿಕಾರಿ ಸಂಗಯ್ಯ ಸ್ವಾಮಿ, ಪ್ರಾಚಾರ್ಯ ಎಸ್.ಎಸ್. ಪಾಟೀಲ್, ಕ್ರೀಡಾ ಸಂಚಾಲಕ ವಿರುಪಣ್ಣ ಪಾಟೀಲ್, ಮಲ್ಲಿಕಾರ್ಜುನ, ದುರ್ಗಾ, ನಾಗರಾಜ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾಧನೆ-ಸಲಕರಣೆ ವಿತರಣೆಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 24 (ಕರ್ನಾಟಕ ವಾರ್ತೆ): ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2026-27ನೇ ಸಾಲಿನ ಫಲಾನುಭವಿ ಆಧಾರಿತ ಯೋಜನೆಗಳಾದ ಆಧಾರ್ ಯೋಜನೆ, ಸಾಧನೆ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶಿಶುಪಾಲನೆ ಭತ್ಯ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿದ ವಿಕಲಚೇತನರಿಗೆ ಬ್ರೆಲ್ ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನೆ-ಸಲಕರಣೆ ಯೋಜನೆ, ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಯೋಜನೆಗಳಿಗೆ ಜಿಲ್ಲಾ ವ್ಯಾಪ್ತಿಯ ಅರ್ಹ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಸೇವಾಸಿಂಧು ತಂತ್ರಾಶದ (ಪೋರ್ಟಲ್) ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಗ್ರಾಮ ಓನ್, ಕರ್ನಾಟಕ ಓನ್, ಬೆಂಗಳ್ರರು ಓನ್ ಹಾಗೂ ://.../ ನಲ್ಲಿ ಮುಖಾಂತರ ಸೆಪ್ಟಂಬರ್ 30ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಕಟ್ಟಡ ಮ.ನಂ: 1-3-1411/4 ಆಶಾಪೂರು ರಸ್ತೆ, ಆಫೀರ್ ಕಾಲೋನಿ ಎದುರುಗಡೆ ಶ್ರೀ ರಾಜಾಮಾತಾ ದೇವಸ್ಥಾನ ಹತ್ತಿರ, ರಾಯಚೂರು ರಾಯಚೂರು ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ:-08532-200992ರವರನ್ನು ಕಚೇರಿ ಕೆಲಸದ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು, ನಗರ ಪ್ರದೇಶದಲ್ಲಿ ನಗರ ಪುನರ್ವಸತಿ ಕಾರ್ಯಕರ್ತರನ್ನು ಹಾಗೂ ತಾಲ್ಲೂಕು ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಮಾರ್ಗದರ್ಶನ ಪಡೆದು ಇಲಾಖೆಯ ಯೋಜನೆಗಳಿಗೆ ಸಂಬಧಿಸಿದತೆ ಆನ್‌ಲೈನ್ ತಂತ್ರಾಶದಲ್ಲಿ ಸಲ್ಲಿಸಿದ ಅರ್ಜಿಯನ್ನು ಸಂಬಧಪಟ್ಟ ದಾಖಲೆಗಳೊಂದಿಗೆ ಹಾರ್ಡ್ ಪ್ರತಿಯೊಂದಿಗೆ ಅರ್ಜಿಗಳನ್ನು ಈ ಇಲಾಖೆಗೆ ಅಥವಾ ಆಯಾ ತಾಲ್ಲೂಕಿನ ಸಂಬಧಪಟ್ಟ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತರ ಒತ್ತಡದ ಬದುಕಿನಲ್ಲಿ ಕ್ರೀಡೆ ಅಗತ್ಯ: ಡಾ. ಸುರೇಶ ಜಿ

ತೊಡಗಿಸಿಕೊಂಡರೆ ದೇಹ ಮತ್ತು ಮನಸ್ಸಿನ ಆರೋಗ್ಯ ಉತ್ತಮವಾಗಿರುತ್ತದೆ. ಒತ್ತಡದ ಜೀವನಶೈಲಿಯಲ್ಲಿ ಆರೋಗ್ಯ ಕಾಪಾಡಿಕೊಳ್ಳಲು ಕ್ರೀಡೆ ಪ್ರಮುಖ ಪಾತ್ರವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಪತ್ರಕರ್ತರಿಗಾಗಿ ವಿವಿಧ ಕ್ರೀಡೆಗಳನ್ನು ಆಯೋಜಿಸಿರುವ ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಪ್ರಯತ್ನ ಅಭಿನಂದನೀಯವಾಗಿದ್ದು, ಬೆಳ್ಳಿ ಮಹೋತ್ಸವದ ಎಲ್ಲಾ ಕಾರ್ಯಕ್ರಮಗಳು ಯಶಸ್ವಿಯಾಗಲಿ ಎಂದು ಹಾರೈಸಿದರು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್ ಮಾತನಾಡಿ, ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಪತ್ರಕರ್ತರು ಹಾಗೂ ಸಾರ್ವಜನಿಕರನ್ನು ಒಳಗೊಂಡಂತೆ ವಿವಿಧ ಚಟುವಟಿಕೆಗಳು ಮತ್ತು ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ಪತ್ರಕರ್ತರ ಕ್ರೀಡಾಕೂಟಕ್ಕೆ ಶಟಲ್ ಬ್ಯಾಡ್ಮಿಂಟನ್ ಮೂಲಕ ಚಾಲನೆ ದೊರೆತಿದ್ದು, ಮುಂದಿನ ದಿನಗಳಲ್ಲಿ ಚೆಸ್, ಕೇರಂ ಹಾಗೂ ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ ಎಂದು ತಿಳಿಸಿದರು.

ಪತ್ರಕರ್ತರಿಗಾಗಿ ಈಗಾಗಲೇ ಕಥೆ ಮತ್ತು ಕವನ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, ಆಯ್ಕೆಯಾದ ಕಥೆ-ಕವನಗಳನ್ನು ಸಂಕಲನ ರೂಪದಲ್ಲಿ ಪ್ರಕಟಿಸಲು ಸಿದ್ಧತೆ ನಡೆದಿದೆ. ಅಲ್ಲದೆ ಛಾಯಾಚಿತ್ರ ಮತ್ತು ವ್ಯಂಗ್ಯಚಿತ್ರ ಸ್ಪರ್ಧೆಗಳನ್ನೂ ಏರ್ಪಡಿಸಲಾಗಿದ್ದು, ಪತ್ರಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಬೆಳ್ಳಿ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಮಾಜಿ ಅಧ್ಯಕ್ಷ ಚನ್ನಬಸವಣ್ಣ, ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ, ಜಗನ್ನಾಥ ಪೂಜಾರಿ, ಮಂಜುನಾಥ ಸಾಲಿ, ಮಹಾನಂದ, ನೀಲಕಂಠಸ್ವಾಮಿ, ಅಣ್ಣಪ್ಪ ಮೇಟಿಗೌಡ, ಗುರುರಾಜ ಕೆ., ಸುರೇಶ್ ಗೌಡ, ಅಮರೇಶ್ ಸಜ್ಜನ, ಖಾಜಾ ಹುಸೇನ್, ದುರ್ಗೇಶ್, ವಾಸು, ಜಯಕುಮಾರ ದೇಸಾಯಿ, ರಾಚಯ್ಯ ಸ್ವಾಮಿ, ಅರುಣ್ ಸೇರಿದಂತೆ ಅನೇಕ ಪತ್ರಕರ್ತರು ಉಪಸ್ಥಿತರಿದ್ದರು.

ಪಂದ್ಯಗಳ ನಿರ್ಣಾಯಕರಾಗಿ ನಿವೃತ್ತ ಶಿಕ್ಷಕ ಮಲ್ಲಪ್ಪ ಹಾಗೂ ಶಿಕ್ಷಕ ಮಹಮ್ಮದ್ ಖಾಲಿದ್ ಕಾರ್ಯನಿರ್ವಹಿಸಿದರು. ಗಿಲ್ಡ್ ಜಂಟಿ ಕಾರ್ಯದರ್ಶಿ ಶ್ರೀಕಾಂತ್ ಸಾವೂರ್ ಕಾರ್ಯಕ್ರಮವನ್ನು ಸಂಯೋಜಿಸಿ ನಿರೂಪಿಸಿದರು.

ಮೊದಲನೇ ಪುಟದಿಂದ

# ಹೋಟೆಲ್‌ಗಳ ಮೇಲೆ ದಿಢೀರ್ ದಾಳಿ, ಭಾರಿ ದಂಡ

## ಆಹಾರದ ಗುಣಮಟ್ಟದ ಮೇಲೆ ಅಧಿಕಾರಿಗಳ ಹದ್ದಿನ ಕಣ್ಣು

ತಪಾಸಣೆ

ಸೆ.9ರಿಂದ 11ರವರೆಗೆ ರಾಯಚೂರು ನಗರದ ಮಂತ್ರಾಲಯ ರಸ್ತೆ, ಲಿಂಗಸುಗೂರು ರಸ್ತೆ, ಹೈದರಾಬಾದ್ ರಸ್ತೆ, ಚಂದ್ರಮೌಳೇಶ್ವರ ವೃತ್ತ, ಗದ್ವಾಲ್ ರಸ್ತೆ ಸೇರಿದಂತೆ ಹಲವು ಪ್ರದೇಶಗಳಲ್ಲಿ ಪರಿಶೀಲನಾ ಕಾರ್ಯಾಚರಣೆ ನಡೆಯಿತು.

ಕಾರ್ಯಾಚರಣೆಗೆ ಎರಡು ಪ್ರತ್ಯೇಕ ತಂಡಗಳನ್ನು ರಚಿಸಲಾಗಿತ್ತು. ರಾಯಚೂರಿನ ಆಹಾರ ಸುರಕ್ಷತಾ ಅಧಿಕಾರಿ, ಲಿಂಗಸುಗೂರಿನ ಆಹಾರ ಸುರಕ್ಷತಾ ಅಧಿಕಾರಿ ಹಾಗೂ ಸಹಾಯಕ ಔಷಧ ನಿಯಂತ್ರಣಾಧಿಕಾರಿ ನೇತೃತ್ವದ ಮೊದಲ ತಂಡವು 60 ಸ್ಥಳಗಳಲ್ಲಿ ತಪಾಸಣೆ ನಡೆಸಿತು.

ಈ ವೇಳೆ ಸ್ವಚ್ಛತಾ ಮಾನದಂಡ ಪಾಲಿಸದಿರುವುದು, ನಿಷೇಧಿತ ಪದಾರ್ಥಗಳನ್ನು ಬಳಸಿರುವುದು ಹಾಗೂ ಬಳಸಿದ ಅಡುಗೆ ಎಣ್ಣೆಯನ್ನು ಪುನಃ ಅಡುಗೆಗೆ ಉಪಯೋಗಿಸಿರುವುದು ಪತ್ತೆಯಾಗಿದೆ. ನಿಯಮ ಉಲ್ಲಂಘನೆಯ ಸ್ವರೂಪಕ್ಕೆ ಅನುಗುಣವಾಗಿ 5 ಸಾವಿರ ರೂ.ದಿಂದ 20 ಸಾವಿರ ರೂ.ವರೆಗೆ ದಂಡ ವಿಧಿಸಲಾಗಿದ್ದು, ಮೊದಲ ತಂಡದ ಕಾರ್ಯಾಚರಣೆಯಲ್ಲಿ ಒಟ್ಟು 53 ಸಾವಿರ ರೂ. ದಂಡ ವಸೂಲಿ ಮಾಡಲಾಗಿದೆ.

ಉಲ್ಲಂಘನೆ ಕಂಡುಬಂದ ಆಹಾರ ಮಳಿಗೆಗಳ ಮಾಲೀಕರಿಗೆ ನೋಟಿಸ್ ನೀಡಿ, ಮುಂದಿನ ದಿನಗಳಲ್ಲಿ ಆಹಾರ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಅಧಿಕಾರಿಗಳು ಸೂಚಿಸಿದ್ದಾರೆ.

43 ಕಡೆ ಎರಡನೇ ತಂಡದ ಕಾರ್ಯಾಚರಣೆ

ಮಾನ್ವಿಯ ಆಹಾರ ಸುರಕ್ಷತಾ ಅಧಿಕಾರಿ ಬನದೇಶ್ವರ ಹಾಗೂ ರಾಯಚೂರಿನ ಸಹಾಯಕ ಔಷಧ ನಿಯಂತ್ರಣಾಧಿಕಾರಿ ಉದಯಕಿಶೋರ್ ನೇತೃತ್ವದ ಎರಡನೇ ತಂಡವು 43 ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ.

ಈ ವೇಳೆ ವಿವಿಧ ಹೋಟೆಲ್, ದಾಬಾ ಹಾಗೂ ರೆಸ್ಟೋರೆಂಟ್‌ಗಳಲ್ಲಿ ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆ ಪತ್ತೆಯಾಗಿದ್ದು, ಒಟ್ಟು 1.47 ಲಕ್ಷ ರೂ. ದಂಡ ವಿಧಿಸಲಾಗಿದೆ.

ಅವಧಿ ಮೀರಿದ ಆಹಾರ ಪದಾರ್ಥಗಳನ್ನು ಬಳಸಿದ ಪ್ರಕರಣಗಳಿಗೆ ಸಂಬಂಧಿಸಿದಂತೆ 8,357 ರೂ. ದಂಡ ವಿಧಿಸಲಾಗಿದೆ. ಇದೇ ರೀತಿ ಸೆ.18 ಮತ್ತು 19ರಂದು ದೇವದುರ್ಗದಲ್ಲಿಯೂ ವಿಶೇಷ ತಪಾಸಣೆ ನಡೆಸಿ 25,500 ರೂ. ದಂಡ ವಿಧಿಸಲಾಗಿದೆ.

ಈ ಕುರಿತು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಂಕಿತ ಅಧಿಕಾರಿ ಡಾ. ಹಂಪಣ್ಣ ಸಜ್ಜನ್ ಪ್ರತಿಕ್ರಿಯಿಸಿ, "ಈ ತಿಂಗಳಲ್ಲಿ ರಾಯಚೂರು ನಗರದಲ್ಲಿ ಎರಡು ತಂಡಗಳ ಮೂಲಕ ತಪಾಸಣೆ ನಡೆಸಲಾಗಿದೆ. ದೇವದುರ್ಗದಲ್ಲಿಯೂ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಹೋಟೆಲ್, ದಾಬಾ ಮತ್ತು ರೆಸ್ಟೋರೆಂಟ್‌ಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲಿಸಲಾಗುತ್ತಿದೆ. ಆಹಾರ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸಿದವರ ವಿರುದ್ಧ ದಂಡಾತ್ಮಕ ಕ್ರಮ ಕೈಗೊಳ್ಳಲಾಗುತ್ತಿದ್ದು, ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ'' ಎಂದು ತಿಳಿಸಿದ್ದಾರೆ.

# ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ರಾಹುಲ್ ಗಾಂಧಿ ಆಗ್ರಹ

ಚುನಾವಣಾ ಆಯೋಗವು ಮತದಾನದ ಸಾಂಸ್ಥಿಕ ರಕ್ಷಕವಾಗಿದ್ದು, ಮತದಾರರ ಹಕ್ಕನ್ನು ಕಾಪಾಡುವ ಜವಾಬ್ದಾರಿ ಅದರ ಮೇಲಿದೆ ಎಂದು ಗಾಂಧಿ ಹೇಳಿದರು. ಮತದಾನದ ಪ್ರಕ್ರಿಯೆಯನ್ನು ಹಾಳುಮಾಡುವುದು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೇಲಿನ ದಾಳಿ ಎಂದು ಆರೋಪಿಸಿದ ಅವರು, ಮೋದಿ, ಶಾ ಹಾಗೂ ಜ್ಞಾನೇಶ್ ಕುಮಾರ್ ವಿರುದ್ಧ ತೀವ್ರ ಪದಗಳಲ್ಲಿ ವಾಗ್ದಾಳಿ ನಡೆಸಿದರು. ಜ್ಞಾನೇಶ್ ಕುಮಾರ್ ಅಪ್ರೂರ್ವ ಆಗಬೇಕು ಹಾಗೂ ಈ ಕುರಿತು ತನಿಖೆ ನಡೆಯಬೇಕು ಎಂದೂ ಆಗ್ರಹಿಸಿದರು.

ಇನ್ನೊಂದೆಡೆ, ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿಯ ಬಳಿಕ ಚುನಾವಣಾ ಆಯೋಗವು, ಆಯೋಗದೊಳಗಿನ ಟಿಪ್ಪಣಿಗಳು ಹಾಗೂ ಭಿನ್ನ ಅಭಿಪ್ರಾಯಗಳು ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯ ಭಾಗವಾಗಿದ್ದು, ಎಸ್‌ಐಆರ್ ಸೇರಿದಂತೆ ಅಂತಿಮವಾಗಿ ಕೈಗೊಂಡ ನಿರ್ಧಾರಗಳು ಸರ್ವಾನುಮತದಿಂದ ನಡೆದಿವೆ ಎಂದು ಸ್ಪಷ್ಟಪಡಿಸಿದೆ.

ಹೀಗಾಗಿ ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂಬುದು ರಾಹುಲ್ ಗಾಂಧಿ ಮಾಡಿರುವ ರಾಜಕೀಯ ಆರೋಪವಾಗಿದ್ದು, ಅದನ್ನು ಸಾಬೀತಾದ ಸಂಗತಿಯಾಗಿ ಚುನಾವಣಾ ಆಯೋಗ ಒಪ್ಪಿಕೊಂಡಿಲ್ಲ. ಆಯೋಗದೊಳಗಿನ 14 ಲಿಖಿತ ಆಕ್ಷೇಪಗಳ ಕುರಿತು ಪ್ರಕಟವಾದ ವರದಿ ಈಗ ದೇಶದ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

# ಬುಲೆರೋ ಡಿಕ್ಕಿ: ಇಬ್ಬರು ಸಾವು, ಪರಿಹಾರಕ್ಕೆ ಆಗ್ರಹಿಸಿ ಹೆದ್ದಾರಿ ತಡೆ

ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಅಧಿಕಾರಿಗಳು ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಹಿಂಪಡೆಯಲಾಯಿತು.

ಸ್ಥಳದಲ್ಲಿ ಡಿವೈಎಸ್ಪಿ ದತ್ತಾತ್ರೇಯ, ಸಿಪಿಐ ಪುಂಡಲಿಕ ಹೊಸ್ಕೇರಪ್ಪ, ಜಾಲಹಳ್ಳಿ ಪಿಎಸ್‌ಐ ವೈಶಾಲಿ ಜಳಕಿ ಸೇರಿದಂತೆ ಪೊಲೀಸ್ ಸಿಬ್ಬಂದಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ಪ್ರತಿಭಟನೆಯಲ್ಲಿ ಶ್ರೀದೇವಿ ನಾಯಕ್, ಬಸನಗೌಡ ದೇಸಾಯಿ, ನರಸಣ್ಣ ನಾಯಕ, ಚಂದಪ್ಪ ಬುದ್ಧಿನ್ನಿ, ಮಾನಪ್ಪ ಕಾವಲಿ, ಬೀಮನಗೌಡ, ಶಂಕರಗೌಡ, ಹೈದರ್ ಸಾಬ್ ಮುಲ್ಲಾ, ಯಮನೂರಪ್ಪ ಕರ್ನಾಳ, ಮೌನೇಶ್ ಹೊಸೂರು, ಬಸವರಾಜ್ ಹೊಸೂರು, ರಂಗಣ್ಣ ಕೋಲಕಾರ, ಭೀಮಣ್ಣ ಗುಮೇದಾರ, ಶ್ರೀಧರ ದೇಸಾಯಿ, ನಂದಪ್ಪ ಪಿ. ಮಡ್ಡಿ, ಬಾಳಪ್ಪ ಬಾಳಿಮನಿ, ದುರುಗಪ್ಪ ರಾಮಪಳ್ಳಿ, ಮೌನೇಶ್ ಜಾಲಹಳ್ಳಿ, ತಿಮ್ಮಣ್ಣ ದಿವಾನ್, ಅಯ್ಯಪ್ಪ ಸ್ವಾಮಿ ಗಣಜಲಿಮಠ ಸೇರಿದಂತೆ ನೂರಾರು ಗ್ರಾಮಸ್ಥರು ಭಾಗವಹಿಸಿದ್ದರು.

# ತುಂಗಭದ್ರಾ ನದಿ ಹರಿವು ಹೆಚ್ಚಳ: ಭಕ್ತರ ಸುರಕ್ಷತೆಗೆ ಶ್ರೀಮಠದಿಂದ ಮುನ್ನೆಚ್ಚರಿಕೆ

ಭಕ್ತರು ಭದ್ರತಾ ಸಿಬ್ಬಂದಿಯ ಸೂಚನೆಗಳಿಗೆ ಸಹಕರಿಸಬೇಕು. ನದಿ ತೀರದಲ್ಲಿ ಯಾವುದೇ ರೀತಿಯ ಅಪಾಯಕ್ಕೆ ಅವಕಾಶ ನೀಡದೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಶ್ರೀಮಠದ ಅಧಿಕಾರಿಗಳು ಮನವಿ ಮಾಡಿದ್ದಾರೆ.

ತುಂಗಭದ್ರಾ ನದಿಯ ನೀರಿನ ಹರಿವಿನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಭಕ್ತರು ಮತ್ತು ಸಾರ್ವಜನಿಕರ ಸುರಕ್ಷತೆಗಾಗಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಮುಂದುವರಿಸಲಾಗುವುದು ಎಂದು ಶ್ರೀಮಠದ ಆಡಳಿತ ಮಂಡಳಿ ತಿಳಿಸಿದೆ.

# ದಿವಾಳಿ ಸರ್ಕಾರದ ಶವಯಾತ್ರೆ: ಬಿಜೆಪಿ ಪ್ರತಿಭಟನೆ

ಬಾಕಿ ಪಾವತಿ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಹಣಕಾಸಿನ ಲಭ್ಯತೆ ಕುರಿತು ಸರ್ಕಾರವನ್ನು ಟೀಕಿಸಿದೆ. ಇದೇ ಹಿನ್ನೆಲೆಯಲ್ಲಿ ಜಿಲ್ಲಾ ಕೇಂದ್ರಗಳಲ್ಲಿ ದಿವಾಳಿ ಸರ್ಕಾರದ ಶವಯಾತ್ರೆ ನಡೆಸಲು ಪಕ್ಷ ಕರೆ ನೀಡಿತ್ತು. ಇವು ಬಿಜೆಪಿ ಮಾಡಿರುವ ಆರೋಪಗಳಾಗಿವೆ.

ರಾಜ್ಯದಲ್ಲಿ ರೈತರು, ಕಾರ್ಮಿಕರು, ಯುವಕರು ಸೇರಿದಂತೆ ವಿವಿಧ ವರ್ಗಗಳು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಅವುಗಳಿಗೆ ಪರಿಹಾರ ಕಲ್ಪಿಸುವ ಬದಲು ಸರ್ಕಾರ ಜನರ ಗಮನ ಬೇರೆಡೆ ಸೆಳೆಯುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಬೇಕು ಹಾಗೂ ಸಾರ್ವಜನಿಕರ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯ ಎನ್. ಶಂಕರಪ್ಪ, ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ ಸೇರಿದಂತೆ ಪಕ್ಷದ ಹಲವು ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಪ್ರತಿಭಟನೆಯುದ್ದಕ್ಕೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದ ಕಾರ್ಯಕರ್ತರು, ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕು, ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯ ಅನುದಾನ ಒದಗಿಸಬೇಕು ಹಾಗೂ ಜನರ ಸಮಸ್ಯೆಗಳಿಗೆ ಆದ್ಯತೆಯ ಮೇರೆಗೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು. ಸರ್ಕಾರ ತನ್ನ ಆಡಳಿತ ಧೋರಣೆಯನ್ನು ಬದಲಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಬಿಜೆಪಿ ಮುಖಂಡರು ಎಚ್ಚರಿಸಿದರು.

# ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಿ: ನ್ಯಾ.ಸಿದ್ದರಾಮಪ್ಪ

ಪರವಾನಗೆಗಳನ್ನು ವಿತರಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಪಂಚಾಯತಿಯ ಕಾರ್ಯನಿರ್ವಹಕ ಅಧಿಕಾರಿ ಚಂದ್ರಶೇಖರ ಪವಾ್ರ, ತಹಶೀಲ್ದಾರ್ ಕಚೇರಿಯ ಶಿರಸ್ತೆದಾರರು, ಮಾಟಮಾರಿ ಗ್ರಾ.ಪಂ ಅಧಿಕಾರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ರಾಜಕಾಲುವೆ ಅವ್ಯವಸ್ಥೆ: ಶಿವರಾಜ ಪಾಟೀಲ್, ರವಿ ಬೋಸರಾಜು ವಿರುದ್ಧ ರಾಮನಗೌಡ ಏಗನೂರು ಆರೋಪ



ರಾಯಚೂರು, ಸೆ.24: ನಗರದ ವಾರ್ಡ್ ನಂ.14ರ ಮಂಗಳಾಪೇಟೆಯಲ್ಲಿ ರಾಜಕಾಲುವೆ, ಚರಂಡಿ ಸೇರಿದಂತೆ ವಿವಿಧ ಮೂಲಸೌಕರ್ಯ ಸಮಸ್ಯೆಗಳನ್ನು ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ಗುರುವಾರ ಪರಿಶೀಲಿಸಿ, ಸ್ಥಳೀಯ ನಿವಾಸಿಗಳ ಅಹವಾಲುಗಳನ್ನು ಆಲಿಸಿದರು.

ಪೆಟ್ರೋಲ್ ಪಂಪ್‌ನಿಂದ ಸಿಟಿ ಟಾಕೀಸ್‌ವರೆಗಿನ ಪ್ರದೇಶದಲ್ಲಿ ಸ್ಥಳೀಯರೊಂದಿಗೆ ಸಂಚರಿಸಿದ ಅವರು, ರಾಜಕಾಲುವೆಯ ಸ್ಥಿತಿಯನ್ನು ವೀಕ್ಷಿಸಿದರು. ರಾಜಕಾಲುವೆಯಲ್ಲಿ ಕಸ ಹಾಗೂ ಹೂಳು ತುಂಬಿಕೊಂಡಿರುವುದರಿಂದ ನೀರು ಸರಾಗವಾಗಿ ಹರಿಯುತ್ತಿಲ್ಲ. ಮಳೆಯಾದಾಗ ಕಾಲುವೆ ತುಂಬಿ ನೀರು ಮನೆಗಳಿಗೆ ನುಗ್ಗುತ್ತಿದ್ದು, ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಸ್ಥಳೀಯರು ಅಳಲು ತೋಡಿಕೊಂಡರು.

ಸಮಸ್ಯೆ ಕುರಿತು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತಂದಿದ್ದರೂ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ನಿವಾಸಿಗಳು ದೂರಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಮನಗೌಡ ಏಗನೂರು, ನಗರ ಶಾಸಕ ಡಾ. ಶಿವರಾಜ ಪಾಟೀಲ್ ಹಾಗೂ ಕಾಂಗ್ರೆಸ್ ಮುಖಂಡ ರವಿ ಬೋಸರಾಜು ವಿರುದ್ಧ ವಾಗ್ದಾಳಿ ನಡೆಸಿದರು. ಅವರ ರಾಜಕೀಯ ಪ್ರಭಾವದಿಂದ ಪಾಲಿಕೆ ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು. ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ ಸಾರ್ವಜನಿಕರ ಹಣ ಸಮರ್ಪಕವಾಗಿ ಬಳಕೆಯಾಗುತ್ತಿಲ್ಲ ಎಂಬ ಆರೋಪವನ್ನೂ ಮಾಡಿದರು.

ಈ ಹಿಂದೆ ಮಳೆ ಅನಾಹುತದ ಸಂದರ್ಭದಲ್ಲಿ ರವಿ ಬೋಸರಾಜು ವಾರ್ಡ್‌ಗೆ ಭೇಟಿ ನೀಡಿ ರಾಜಕಾಲುವೆ ಸಮಸ್ಯೆ ಪರಿಹರಿಸುವ ಭರವಸೆ ನೀಡಿದ್ದರು. ಆದರೆ ಇದುವರೆಗೆ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಏಗನೂರು ದೂರಿದರು.

ರೈಸಿಂಗ್ ರಾಯಚೂರು ಹೆಸರಿನಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ನಗರದ ಅಭಿವೃದ್ಧಿ ಕುರಿತು ಪ್ರಚಾರ ಮಾಡಲಾಗುತ್ತಿದೆ. ಆದರೆ ವಾಸ್ತವದಲ್ಲಿ ಮಂಗಳಾಪೇಟೆ ಸೇರಿದಂತೆ ನಗರದ ಹಲವು ಬಡಾವಣೆಗಳ ಜನರು ರಾಜಕಾಲುವೆ, ಚರಂಡಿ, ರಸ್ತೆ ಹಾಗೂ ಇತರ ಮೂಲಸೌಕರ್ಯ ಸಮಸ್ಯೆಗಳಿಂದ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಟೀಕಿಸಿದರು.

ನಗರದ ಮೂಲಸೌಕರ್ಯ ಸಮಸ್ಯೆಗಳಿಗೆ ಆದ್ಯತೆ ನೀಡಿ ಪರಿಹಾರ ಕಲ್ಪಿಸಬೇಕು. ಮಂಗಳಾಪೇಟೆಯ ರಾಜಕಾಲುವೆಯಲ್ಲಿರುವ ಕಸ ಮತ್ತು ಹೂಳನ್ನು ತೆರವುಗೊಳಿಸಿ, ಮಳೆ ನೀರು ಸರಾಗವಾಗಿ ಹರಿಯುವಂತೆ ಶಾಶ್ವತ ವ್ಯವಸ್ಥೆ ಮಾಡಬೇಕು. ಸಮಸ್ಯೆಗೆ ಶೀಘ್ರ ಪರಿಹಾರ ದೊರೆಯದಿದ್ದರೆ ಸ್ಥಳೀಯರನ್ನು ಸಂಘಟಿಸಿ ಹೋರಾಟ ನಡೆಸಲಾಗುವುದು ಎಂದು ರಾಮನಗೌಡ ಏಗನೂರು ಎಚ್ಚರಿಸಿದರು.

**ಸೂಚನೆ:** ರಾಮನಗೌಡ ಏಗನೂರು ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ಶಿವರಾಜ ಪಾಟೀಲ್ ಹಾಗೂ ರವಿ ಬೋಸರಾಜು ಅವರ ಪ್ರತಿಕ್ರಿಯೆ ಮೂಲ ಮಾಹಿತಿಯಲ್ಲಿ ಲಭ್ಯವಾಗಿಲ್ಲ.

# ರೈತರ ಮೂಲಸೌಕರ್ಯ ಸಮಸ್ಯೆ ಪರಿಹರಿಸಲು ರೈತ ಸಂಘ-ಹಸಿರು ಸೇನೆ ಆಗ್ರಹ



ಲಿಂಗಸುಗೂರು: ತಾಲೂಕಿನ ನಿಲೋಗಲ್ ಗ್ರಾಮದಲ್ಲಿ ರೈತರ ಜಮೀನುಗಳಿಗೆ ತೆರಳುವ ದಾರಿಗಳನ್ನು ಸುಗಮಗೊಳಿಸುವುದು ಸೇರಿದಂತೆ ವಿವಿಧ ಮೂಲಸೌಕರ್ಯಗಳನ್ನು ಒದಗಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಾಸುದೇವ ಮೇಟಿ ಬಣ) ವತಿಯಿಂದ ತಾಲೂಕು ಪಂಚಾಯಿತಿ ಸಿಬ್ಬಂದಿಗೆ ಮನವಿ ಸಲ್ಲಿಸಲಾಯಿತು.

ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ಕಾಜಾವಲಿ ಜಾಗೀರ ನಂದಿಹಾಳ ನೇತೃತ್ವದಲ್ಲಿ ಮನವಿ ಸಲ್ಲಿಸಿದ ಮುಖಂಡರು, ರೈತರ ಜಮೀನುಗಳಿಗೆ ತೆರಳುವ ದಾರಿಗಳಲ್ಲಿ ಜಾಲಿ ಹಾಗೂ ಮುಳ್ಳಿನ ಕಂಟಿಗಳು ಬೆಳೆದು, ಅಲ್ಲಲ್ಲಿ ತಗ್ಗು-ಗುಂಡಿಗಳು ನಿರ್ಮಾಣವಾಗಿವೆ. ಇದರಿಂದ ರೈತರು ಹಾಗೂ ಕೃಷಿ ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ತಿಳಿಸಿದರು.

ಸಮಸ್ಯೆಯನ್ನು ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಅನುದಾನದ ಕೊರತೆ ನೆಪವೊಡ್ಡಿ ಸೂಕ್ತಕ್ರಮಕೈಗೊಂಡಿಲ್ಲಎಂದುಆರೋಪಿಸಿದಅವರು, ಕೂಡಲೇ ದಾರಿಗಳಲ್ಲಿರುವ ಮುಳ್ಳು-ಕಂಟಿಗಳನ್ನು ತೆರವುಗೊಳಿಸಿ, ತಗ್ಗು-ಗುಂಡಿಗಳನ್ನು ಮುಚ್ಚಿ ರೈತರ ಓಡಾಟಕ್ಕೆ ಸುಗಮ ರಸ್ತೆ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಅಲ್ಲದೆ, ಗ್ರಾಮದಲ್ಲಿರುವ ಅರ್ಹ ಬಡವರು ಹಾಗೂ ಜಾನುವಾರುಗಳನ್ನು ಹೊಂದಿರುವ ರೈತರಿಗೆ ಹೊಸ ಜಾನುವಾರು ಶೆಡ್‌ಗಳನ್ನು ನಿರ್ಮಿಸಿಕೊಡಬೇಕು ಎಂದು ಆಗ್ರಹಿಸಿದರು. ಬೇಡಿಕೆಗಳ ಈಡೇರಿಕೆಗೆ ಮತ್ತೊಮ್ಮೆ ನಿರ್ಲಕ್ಷ್ಯ ವಹಿಸಿದರೆ ಇತರ ಜನಪರ ಸಂಘಟನೆಗಳೊಂದಿಗೆ ತಾಲೂಕು ಪಂಚಾಯಿತಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ದೊಡ್ಡಪ್ಪ ನಿಲೋಗಲ್, ಶರಣಬಸವ ಹತ್ತಿಗುಡ್ಡ, ಕೂಡ್ಲೆಪ್ಪ ನಿಲೋಗಲ್, ಚನ್ನಬಸವ ಗದಿಗಿನ್, ಮೌಲಾಲಿ, ನರಸಣ್ಣ, ಮೌನೇಶ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಾಜಪೇಯಿ ನಗರ ನಿವೇಶನ ಯೋಜನೆಗೆ ವಾಸಯೋಗ್ಯ ಭೂಮಿ ಮಂಜೂರು ಮಾಡಲು ಕರವೇ ಒತ್ತಾಯ



ಲಿಂಗಸುಗೂರು: ವಾಜಪೇಯಿ ನಗರ ನಿವೇಶನ ಯೋಜನೆಯಡಿ ಪುರಸಭೆ ವ್ಯಾಪ್ತಿಯ ಬಡ ಹಾಗೂ ನಿವೇಶನರಹಿತ ಕುಟುಂಬಗಳಿಗೆ ವಾಸಿಸಲು ಯೋಗ್ಯವಾದ ಭೂಮಿ ಮಂಜೂರು ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಪದಾಧಿಕಾರಿಗಳು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಪುರಸಭೆ ವ್ಯಾಪ್ತಿಯ ಸರ್ವೆ ನಂ.286ರಲ್ಲಿ ಯೋಜನೆಗಾಗಿ ಮಂಜೂರು ಮಾಡಿರುವ ಭೂಮಿ ಗುಡ್ಡಗಾಡು ಪ್ರದೇಶವಾಗಿದ್ದು, ದೊಡ್ಡ ಕಲ್ಲುಬಂಡೆಗಳಿಂದ ಕೂಡಿದೆ. ರಸ್ತೆ ಸಂಪರ್ಕ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವುದಕ್ಕೂ ತೊಂದರೆಯಾಗಿದ್ದು, ಫಲಾನುಭವಿಗಳು ಮನೆ ನಿರ್ಮಿಸಿಕೊಂಡು ವಾಸಿಸಲು ಯೋಗ್ಯವಾಗಿಲ್ಲ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.

ಈ ಕುರಿತು ಪುರಸಭೆ ಮುಖ್ಯಾಧಿಕಾರಿಗಳು 2023ರ ಡಿ.11ರಂದೇ ತಹಶೀಲ್ದಾರರಿಗೆ ಪತ್ರ ಬರೆದು, ಮಂಜೂರಾದ ಭೂಮಿ ವಾಸಕ್ಕೆ ಯೋಗ್ಯವಾಗಿಲ್ಲದ ಕಾರಣ ಪರ್ಯಾಯ ಭೂಮಿ ಮಂಜೂರು ಮಾಡುವಂತೆ ಕೋರಿದ್ದರೂ ಇದುವರೆಗೆ ಕ್ರಮ ಕೈಗೊಂಡಿಲ್ಲ ಎಂದು ಸಂಘಟನೆಯ ಮುಖಂಡರು ದೂರಿದರು.

ಫಲಾನುಭವಿಗಳ ಆಯ್ಕೆ ಪಟ್ಟಿಯಲ್ಲೂ ಲೋಪಗಳಿದ್ದು, ಮನೆ ಹಾಗೂ ಆರ್ಥಿಕ ಸೌಲಭ್ಯ ಹೊಂದಿರುವವರ ಹೆಸರು ಸೇರಿಸಲಾಗಿದೆ ಎಂದು ಆರೋಪಿಸಿದ ಅವರು, ಪಟ್ಟಿಯನ್ನು ಮರುಪರಿಶೀಲಿಸಿ ನಿಜವಾದ ಬಡ ಹಾಗೂ ನಿವೇಶನರಹಿತ ಕುಟುಂಬಗಳನ್ನು ಗುರುತಿಸಿ ಹಕ್ಕುಪತ್ರ ವಿತರಿಸಬೇಕು ಎಂದು ಆಗ್ರಹಿಸಿದರು.

ಈ ಹಿಂದೆ ಎರಡು ತಿಂಗಳೊಳಗೆ ವಾಸಯೋಗ್ಯ ಭೂಮಿ ಗುರುತಿಸಿ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವ ಭರವಸೆ ನೀಡಲಾಗಿತ್ತು. ಆದರೆ ಒಂದೂವರೆ ತಿಂಗಳು ಕಳೆದರೂ ಯಾವುದೇ ಕ್ರಮ ಕಂಡುಬಂದಿಲ್ಲ. ಪುರಸಭೆ ವ್ಯಾಪ್ತಿ ಅಥವಾ ಸಮೀಪದ ಪ್ರದೇಶದಲ್ಲಿ ರಸ್ತೆ, ನೀರು ಮತ್ತು ವಿದ್ಯುತ್ ಸೌಲಭ್ಯ ಕಲ್ಪಿಸಲು ಅನುಕೂಲವಾಗುವ ಭೂಮಿಯನ್ನು ಗುರುತಿಸಿ ಬಡ ಕುಟುಂಬಗಳಿಗೆ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನಿ ಸೇನೆಯ ತಾಲೂಕು ಅಧ್ಯಕ್ಷ ಜಿಲಾನಿ ಪಾಷಾ, ಅಜಮೀರ ಶೇಖ, ರವಿಕುಮಾರ್ ಬರಗುಡಿ, ಮೊಷಿನ್ ಖಾನ್, ಮರಿಯಪ್ಪ ಹಿರೇನಗನೂರ, ಅಲ್ಲಾವುದ್ದೀನ್ ಬಾಬಾ, ಶಬ್ಬೀರ್ ಫಲವಾಲೆ, ಜಾಫರ್ ರಹೀಮ್, ಇಲಿಯಾಸ್, ಅಜೀಜ್ ಪಾಷಾ, ವೀರೇಶ ಐದನಾಳ, ಅಮೀರಾ ಬೇಗಂ, ಹನುಮಮ್ಮ, ಹುಲಿಗಮ್ಮ, ರಜಿಯಾ ಸುಲ್ತಾನ್, ನೂರಜಾ ಬೇಗಂ, ನಿರ್ಮಲ, ಮಹಾಂತೇಶ, ಜಮಲಸಾಬ್, ದಾವಲಸಾಬ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಐದನಾಳ ಎಸ್‌ಸಿ ವಾರ್ಡ್‌ನಲ್ಲಿ ಚರಂಡಿ ಸಮಸ್ಯೆ: ಪರಿಹಾರಕ್ಕೆ ಗ್ರಾಮಸ್ಥರ ಒತ್ತಾಯ



ಲಿಂಗಸುಗೂರು: ತಾಲೂಕಿನ ಕಾಳಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐದನಾಳ ಗ್ರಾಮದ ಎಸ್‌ಸಿ ವಾರ್ಡ್‌ನಲ್ಲಿ ಚರಂಡಿ ವ್ಯವಸ್ಥೆ ಸರಿಪಡಿಸಿ, ಹದಗೆಟ್ಟ ರಸ್ತೆಯನ್ನು ದುರಸ್ತಿಗೊಳಿಸುವಂತೆ ಒತ್ತಾಯಿಸಿ ಗ್ರಾಮಸ್ಥರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಸಿದರು.

ಎಸ್‌ಸಿ ವಾರ್ಡ್‌ನಲ್ಲಿ ಚರಂಡಿ ವ್ಯವಸ್ಥೆ ಅಸ್ತವ್ಯಸ್ತಗೊಂಡಿದ್ದು, ಕೊಳಚೆ ನೀರು ಸರಾಗವಾಗಿ ಹರಿಯದೆ ಮನೆಗಳ ಮುಂಭಾಗ ಹಾಗೂ ರಸ್ತೆಯ ಮೇಲೆ ನಿಲ್ಲುತ್ತಿದೆ. ಇದರಿಂದ ದುರ್ವಾಸನೆ ಹರಡುವುದರ ಜೊತೆಗೆ ಸೊಳ್ಳೆಗಳ ಹಾವಳಿ ಹೆಚ್ಚಾಗಿ ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದೆ. ವಿಶೇಷವಾಗಿ ಮಕ್ಕಳು ಹಾಗೂ ವೃದ್ಧರ ಆರೋಗ್ಯದ ಮೇಲೆ ಪರಿಣಾಮ ಬೀರುವ ಆತಂಕವಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಚರಂಡಿ ನೀರು ರಸ್ತೆಯ ಮೇಲೆಯೇ ನಿಲ್ಲುತ್ತಿರುವುದರಿಂದ ಸಾರ್ವಜನಿಕರ ಸಂಚಾರಕ್ಕೂ ತೀವ್ರ ತೊಂದರೆಯಾಗುತ್ತಿದೆ. ಸಮಸ್ಯೆ ಕುರಿತು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಗ್ರಾಮಸ್ಥರು ದೂರಿದ್ದಾರೆ.

ಕೂಡಲೇ ಚರಂಡಿಗಳನ್ನು ಸ್ವಚ್ಛಗೊಳಿಸಿ ಕೊಳಚೆ ನೀರು ಸರಾಗವಾಗಿ ಹರಿಯುವಂತೆ ವ್ಯವಸ್ಥೆ ಮಾಡಬೇಕು ಹಾಗೂ ಹದಗೆಟ್ಟ ರಸ್ತೆಯನ್ನು ದುರಸ್ತಿಗೊಳಿಸಬೇಕು. ಸಮಸ್ಯೆಗೆ ಶೀಘ್ರ ಪರಿಹಾರ ಕಲ್ಪಿಸದಿದ್ದರೆ ಗ್ರಾಮ ಪಂಚಾಯಿತಿ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಎಸ್‌ಸಿ ವಾರ್ಡ್‌ನ ಮಹಿಳೆಯರಾದ ಶರಣಮ್ಮ, ದುರ್ಗಮ್ಮ, ಹುಲಗೆಮ್ಮ, ಬಸಮ್ಮ, ರಾಧಾ, ಗುಂಡಪ್ಪ ಗ್ರಾಕೂಸ್ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮನೆಯಲ್ಲೇ ಹಸಿ ತ್ಯಾಜ್ಯದಿಂದ ಗೊಬ್ಬರ ತಯಾರಿಕೆ ತರಬೇತಿ




ಲಿಂಗಸುಗೂರು: ಪಟ್ಟಣದಲ್ಲಿ ಸ್ವಚ್ಛ ಭಾರತ ಅಭಿಯಾನ 2.0 ಯೋಜನೆಯಡಿ ಸ್ವಚ್ಛತೆಯೇ ಸೇವೆ-2026 ಕಾರ್ಯಕ್ರಮದ ಅಂಗವಾಗಿ ವಾರ್ಡ್ ನಂ.18ರಲ್ಲಿ ಸಾರ್ವಜನಿಕರಿಗೆ ಮನೆಯಲ್ಲಿಯೇ ಹಸಿ ತ್ಯಾಜ್ಯದಿಂದ ಗೊಬ್ಬರ ತಯಾರಿಸುವ (ಹೋಮ್ ಕಾಂಪೋಸ್ಟಿಂಗ್) ಕುರಿತು ತರಬೇತಿ ನೀಡಲಾಯಿತು.

ಅಕ್ಕ ಕೆಫೆ ಸಮೀಪ ನಡೆದ ಕಾರ್ಯಕ್ರಮದಲ್ಲಿ ಸಾರ್ವಜನಿಕರು, ಅಕ್ಕ ಕೆಫೆಯ ಅಡುಗೆ ಸಿಬ್ಬಂದಿ ಹಾಗೂ ಸಮುದಾಯ ಸಂಚಾಲಕಿಯರ ಸಮ್ಮುಖದಲ್ಲಿ ಮನೆಯಲ್ಲಿ ಉತ್ಪತ್ತಿಯಾಗುವ ಹಸಿ ಸೊಪ್ಪು, ತರಕಾರಿ ಮತ್ತು ಹಣ್ಣುಗಳ ತ್ಯಾಜ್ಯವನ್ನು ಬಳಸಿಕೊಂಡು ಸಾವಯವ ಗೊಬ್ಬರ ತಯಾರಿಸುವ ವಿಧಾನವನ್ನು ಪ್ರಾಯೋಗಿಕವಾಗಿ ತಿಳಿಸಿಕೊಡಲಾಯಿತು.

ಸೆ.17ರಿಂದ ಅ.2ರವರೆಗೆ ನಡೆಯುವ ಸ್ವಚ್ಛತೆಯೇ ಸೇವೆ ಅಭಿಯಾನದ ಮಹತ್ವ, ಉದ್ದೇಶ ಹಾಗೂ ಚಟುವಟಿಕೆಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು. ಪ್ರತಿಯೊಬ್ಬರೂ ಮನೆಯ ಹಸಿ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದೆ, ಮನೆಯಲ್ಲಿಯೇ ಗೊಬ್ಬರವಾಗಿ ಪರಿವರ್ತಿಸಿ ಗಿಡಗಳಿಗೆ ಬಳಸುವಂತೆ ತಿಳಿಸಲಾಯಿತು.

ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದರ ಜೊತೆಗೆ ಗಿಡಮರಗಳನ್ನು ಉಳಿಸಿ ಬೆಳೆಸುವ ಮೂಲಕ ಸ್ವಚ್ಛ ಮತ್ತು ಹಸಿರು ಪರಿಸರ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಲಾಯಿತು.

ಈ ಸಂದರ್ಭದಲ್ಲಿ ಸೌಮ್ಯ ವಸ್ತದ, ಅನ್ನಪೂರ್ಣ, ಮಾನಸ, ಗೀತಾ, ಶಶಿಕಲಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿ ಜೀವನವೇ ಭವಿಷ್ಯದ ಯಶಸ್ಸಿಗೆ ಭದ್ರ ಬುನಾದಿ: ಡಾ. ಎ. ಚನ್ನಪ್ಪ



ರಾಯಚೂರು: ವಿದ್ಯಾರ್ಥಿ ಜೀವನವು ಭವಿಷ್ಯದ ಯಶಸ್ಸಿಗೆ ಭದ್ರ ಬುನಾದಿಯಾಗಿದ್ದು, ವಿದ್ಯಾರ್ಥಿನಿಯರು ಈ ಹಂತವನ್ನು ಸಮರ್ಪಕವಾಗಿ ಬಳಸಿಕೊಂಡು ಸ್ಪಷ್ಟ ಗುರಿ, ನಿರಂತರ ಪರಿಶ್ರಮ ಹಾಗೂ ಆತ್ಮವಿಶ್ವಾಸದೊಂದಿಗೆ ಮುನ್ನಡೆಯಬೇಕು ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಸಚಿವ (ಆಡಳಿತ) ಡಾ. ಎ. ಚನ್ನಪ್ಪ ಕೆಎಎಸ್ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ 2026-27ನೇ ಸಾಲಿನ ವಿವಿಧ ಚಟುವಟಿಕೆಗಳ ಉದ್ಘಾಟನೆ ಹಾಗೂ ಬಿ.ಎ., ಬಿ.ಕಾಂ., ಬಿ.ಎಸ್ಸಿ. ಮತ್ತು ಬಿ.ಸಿ.ಎ. ಪ್ರಥಮ ವರ್ಷದ ವಿದ್ಯಾರ್ಥಿನಿಯರ ಸ್ವಾಗತ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಪದವಿ ಶಿಕ್ಷಣದ ಅವಧಿಯಲ್ಲಿ ವಿದ್ಯಾರ್ಥಿನಿಯರು ಜ್ಞಾನವನ್ನು ವಿಸ್ತರಿಸಿಕೊಳ್ಳುವುದರ ಜೊತೆಗೆ ಭವಿಷ್ಯದ ಗುರಿಯನ್ನು ಸ್ಪಷ್ಟವಾಗಿ ರೂಪಿಸಿಕೊಳ್ಳಬೇಕು. ಸಮಯದ ಸದ್ಬಳಕೆ, ನಿರಂತರ ಜ್ಞಾನಾರ್ಜನೆ ಮತ್ತು ಪರಿಶ್ರಮ ಯಶಸ್ಸಿನ ಪ್ರಮುಖ ಸಾಧನಗಳಾಗಿವೆ. ಪದವಿ ಶಿಕ್ಷಣದೊಂದಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆಯೂ ಆಸಕ್ತಿ ಬೆಳೆಸಿಕೊಂಡು ಆರಂಭಿಕ ಹಂತದಿಂದಲೇ ಸಿದ್ಧತೆ ನಡೆಸಬೇಕು. ಸರ್ಕಾರದ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರಿಗೆ ಉತ್ತಮ ಅವಕಾಶಗಳಿದ್ದು, ಅವುಗಳನ್ನು ಪಡೆದುಕೊಳ್ಳಲು ಆತ್ಮವಿಶ್ವಾಸದಿಂದ ಪ್ರಯತ್ನಿಸಬೇಕು ಎಂದು ಸಲಹೆ ನೀಡಿದರು.

ಅತಿಥಿಯಾಗಿ ಭಾಗವಹಿಸಿದ್ದ ಚಿಕಲ್ಪರ್ವಿಯ ಶ್ರೀ ರುದ್ರಮುನೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಗಿರಿಧರ್ ಪೂಜಾರ ಮಾತನಾಡಿ, ವಿದ್ಯಾರ್ಥಿ ಜೀವನ ವ್ಯಕ್ತಿತ್ವ ನಿರ್ಮಾಣದ ಪ್ರಮುಖ ಹಂತವಾಗಿದೆ. ಉತ್ತಮ ಸಂಸ್ಕಾರ, ಶಿಸ್ತು, ಸಮಯಪ್ರಜ್ಞೆ, ಆತ್ಮವಿಶ್ವಾಸ ಮತ್ತು ಸತತ ಪರಿಶ್ರಮವನ್ನು ರೂಢಿಸಿಕೊಳ್ಳಬೇಕು. ತಂದೆ-ತಾಯಿಯ ತ್ಯಾಗ ಮತ್ತು ನಿರೀಕ್ಷೆಗಳನ್ನು ಗೌರವಿಸಿ, ತಪ್ಪು ದಾರಿಗೆ ಒಳಗಾಗದೆ ಗುರಿಯತ್ತ ಸಾಗಬೇಕು ಎಂದರು. ಇದೇ ವೇಳೆ ಐಎಎಸ್, ಕೆಎಎಸ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ, ಸಾಮಾನ್ಯ ಜ್ಞಾನ, ಪ್ರಚಲಿತ ವಿದ್ಯಮಾನಗಳು ಹಾಗೂ ನಿರಂತರ ಓದುವ ಅಭ್ಯಾಸದ ಕುರಿತು ಮಾರ್ಗದರ್ಶನ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಪ್ರಥಮ ವರ್ಷದ ವಿದ್ಯಾರ್ಥಿನಿಯರನ್ನು ಸ್ವಾಗತಿಸಿ, ಕಾಲೇಜಿನಲ್ಲಿ ದೊರೆಯುವ ಶೈಕ್ಷಣಿಕ, ಸಾಂಸ್ಕೃತಿಕ, ಕ್ರೀಡಾ ಹಾಗೂ ಇತರ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಶಿಕ್ಷಣದೊಂದಿಗೆ ಶಿಸ್ತು, ಸಂಸ್ಕಾರ, ಮಾನವೀಯ ಮೌಲ್ಯ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ದೈಹಿಕ ಶಿಕ್ಷಣ ನಿರ್ದೇಶಕ ಹಾಗೂ ಸಾಂಸ್ಕೃತಿಕ ಘಟಕದ ಸಂಚಾಲಕ ಡಾ. ಪ್ರಸನ್ನಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿ, 2026-27ನೇ ಸಾಲಿನಲ್ಲಿ ಕಾಲೇಜಿನಲ್ಲಿ ಹಮ್ಮಿಕೊಳ್ಳಲಿರುವ ಶೈಕ್ಷಣಿಕ, ಸಾಂಸ್ಕೃತಿಕ, ಕ್ರೀಡಾ ಮತ್ತು ವಿದ್ಯಾರ್ಥಿ ಅಭಿವೃದ್ಧಿ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.

ವೇದಿಕೆಯಲ್ಲಿ ಐಕ್ಯೂಎಸಿ ಸಂಯೋಜಕಿ ಡಾ. ಜ್ಯೋತಿ ಸಿ.ಕೆ., ಸಹ ಸಂಯೋಜಕ ಶರಣಗೌಡ ಕೆ., ಸಿಬ್ಬಂದಿ ಕಾರ್ಯದರ್ಶಿ ಡಾ. ಸೈಯದ್ ರಶೀದಾ ಪರ್ವೀನ್, ಡಾ. ಸಂತೋಷ್ ಕುಮಾರ್ ರಂಗನಾಥ್ ಬಿಲ್ಲಾರ್ ಡಾ. ಸ್ವರೂಪ ರಾಣಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಡಾ. ಉಮಾದೇವಿ, ಸುಮಿತ್ರ ಪ್ಯಾಟಿ, ಡಾ. ಸುರೇಶ ಶರಣಪ್ಪ, ಸರಸ್ವತಿ, ಡಾ. ಚೆನ್ನಬಸವ, ಡಾ. ಅಸ್ಮಾ ಸೇರಿದಂತೆ ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಸುಚಿತ್ರ ನಿರೂಪಿಸಿದರು, ಸೌಜನ್ಯ ಪ್ರಾರ್ಥಿಸಿದರು, ಸಾನಿಯಾ ಸ್ವಾಗತಿಸಿ, ನಾಗಮ್ಮ ವಂದಿಸಿದರು.

# ಮಾನವಿ ನಗರ ಯೋಜನಾ ಪ್ರಾಧಿಕಾರ: ಸಾರ್ವಜನಿಕರು ಆಕ್ಷೇಪಣೆ ಸಲ್ಲಿಸಲು ಕಾಲವಕಾಶ

ರಾಯಚೂರು ಸೆಪ್ಟಂಬರ್ 24 (ಕರ್ನಾಟಕ ವಾರ್ತೆ): ಮಾನವಿ ನಗರ ಯೋಜನಾ ಪ್ರಾಧಿಕಾರ ಸ್ಥಳಿಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಸಿದ್ದಪಡಿಸಿದಲಾಗಿರುವ ಜಿಐಎಸ್ ಆಧಾರಿತ ರೋಡ್ ನೆಟ್ವರ್ಕ್ ಗ್ರಿಡ್ ಪ್ಲಾನ್ ನಕ್ಷೆಯನ್ನು ಈ ಕಚೇರಿಯಲ್ಲಿ ಹಾಗೂ ಮಾನವಿ ಪುರಸಭೆ ಕಚೇರಿಯಲ್ಲಿ ಸಾರ್ವಜನಿಕ ವಿಕ್ಷಣೆಗಾಗಿ ಇರಿಸಲಾಗಿದ್ದು, ಸಾರ್ವಜನಿಕರು ತಮ್ಮ ಸಲಹೆ/ಸೂಚನೆಗಳು ಅಥವಾ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಸಲ್ಲಿಸಬಹುದಾಗಿದೆ ಎಂದು ಕೋರಲಾಗಿದೆ.

ರಾಜ್ಯದಲ್ಲಿ ಸ್ಥಳೀಯ ಯೋಜನಾ ಪ್ರದೇಶಗಳಲ್ಲಿನ ಅನುಮೋದಿತ ಮಹಾಯೋಜನೆ ಹೊಂದಿರುವ ಹಾಗೂ ಮಹಾಯೋಜನೆ ತಯಾರಿಕೆ ವಿವಿಧ ಹಂತಗಳಲ್ಲಿರುವ ನಗರ ಅಥವಾ ಪಟ್ಟಣಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 76-ಕೆ ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸದರಿ ಕಾಯ್ದೆಯ ಕಲಂ 12(1)(ಬಿ) ರಂತೆ ತಯಾರಿಸಿರುವ ಜಿಐಎಸ್ ಆಧಾರಿತ ರೋಡ್ ನೆಟ್ವರ್ಕ್ ಗ್ರಿಡ್ ಪ್ಲಾನ್‌ಗೆ ಈ ಕಾಯ್ದೆಯ ಕಲಂ 13(1) ರಡಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ನಅಇ 358 2026(ಇ) ದಿನಾಂಕ:09-09-2026 ರಲ್ಲಿ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಈ ಯೋಜನೆಯಿಂದ ಬಾಧಿತರಾಗಬಹುದಾದ ಸಾರ್ವಜನಿಕರು ತಮ್ಮ ಸಲಹೆ/ಸೂಚನೆಗಳು ಅಥವಾ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆಯು ದಿನ ಪತ್ರಿಕೆಯಲ್ಲಿ ಪ್ರಕಟಗೊಂಡ ದಿನಾಂಕದಿದ 60 ದಿನಗಳ ಒಳಗಾಗಿ ಈ ಕಚೇರಿಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಅಥವಾ ಇ-ಮೇಲ್ ಮೂಲಕ ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ನಿಗಧಿತ 60 ದಿನಗಳ ಅವಧಿಯೊಳಗೆ ಸ್ವೀಕರಿಸಲ್ಪಟ್ಟ ಸಲಹೆ, ಸೂಚನೆಗಳು ಹಾಗೂ ಆಕ್ಷೇಪಣೆಗಳನ್ನು ಮಾತ್ರ ಪರಿಗಣಿಸಲಾಗುವುದು ಸದರಿ ಅವಧಿ ಮುಕ್ತಾಯಗೊಂಡ ನಂತರ ಸ್ವೀಕರಿಸಲ್ಪಡುವ ಯಾವುದೇ ಸಲಹೆ, ಸೂಚನೆ ಅಥವಾ ಆಕ್ಷೇಪಣೆಯನ್ನು ಪರಿಗಣಿಸಲಾಗುವುದಿಲ್ಲ ಎಂದು ಮಾನವಿ ನಗರ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಆಶ್ರಯ ನಿವೇಶನ, ವಸತಿ ಯೋಜನೆಗೆ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 24 (ಕರ್ನಾಟಕ ವಾರ್ತೆ): 2018ರ ವಸತಿ ಮತ್ತು ನಿವೇಶನ ರಹಿತರ ಸಮೀಕ್ಷೆ ಪಟ್ಟಿಯಿಂದ ಹೊರಗುಳಿದಿರುವ ಗ್ರಾಮೀಣ ಪ್ರದೇಶದ ಅರ್ಹ ಫಲಾನುಭವಿಗಳನ್ನು ಸಮೀಕ್ಷೆ ಪಟ್ಟಿಗೆ ಸೇರ್ಪಡೆಗೊಳಿಸಲು ಅವಕಾಶ ಕಲ್ಪಿಸಲಾಗಿದ್ದು, ಅರ್ಹ ಫಲಾನುಭವಿಗಳು 2026ರ ಸೆಪ್ಟೆಂಬರ್ 30ರೊಳಗಾಗಿ ಸಂಬಧಪಟ್ಟ ಗ್ರಾಮ ಪಂಚಾಯತಿಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ತಿಳಿಸಿದ್ದಾರೆ.

ಗ್ರಾಮೀಣ ಆಶ್ರಯ ನಿವೇಶನ ಯೋಜನೆ ಹಾಗೂ ಗ್ರಾಮೀಣ ವಿವಿಧ ವಸತಿ ಯೋಜನೆಗಳಡಿ ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುವ ನಿವೇಶನ ರಹಿತ ಹಾಗೂ ವಸತಿ ರಹಿತ ಅರ್ಹ ಫಲಾನುಭವಿಗಳಿಗೆ ಉಚಿತ ನಿವೇಶನ ಒದಗಿಸುವ ಉದ್ದೇಶ ಹೊಂದಲಾಗಿದೆ.

ಅರ್ಹತೆಗಳು: ಅರ್ಜಿದಾರರು ಮಹಿಳೆಯಾಗಿರಬೇಕು. ವಿವಾಹಿತ ಅಥವಾ ಅವಿವಾಹಿತ ಮುಖ್ಯಸ್ಥರು/ಗ್ರಹಿಣಿಯರು ಅರ್ಹರಾಗಿರುತ್ತಾರೆ. ಮಾಜಿ ಸೈನಿಕರು, ವಿಧುರರು, ಅಂಗವಿಕಲರು ಹಾಗೂ ಹಿರಿಯ ನಾಗರಿಕರಿದ್ದಲ್ಲಿ ಪುರುಷರೂ ಅರ್ಹರಾಗಿರುತ್ತಾರೆ. ಅರ್ಜಿದಾರರು ಸಂಬಧಪಟ್ಟ ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರಬೇಕು. ಕುಟುಂಬವು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿರಬೇಕು ಮತ್ತು ವಾರ್ಷಿಕ ಆದಾಯ 1,20,000 ರೂ. ಗಿಂತ ಕಡಿಮೆ ಇರಬೇಕು.

ಅರ್ಜಿದಾರರ ಕುಟುಂಬವು ವಸತಿ ಹಾಗೂ ನಿವೇಶನ ರಹಿತವಾಗಿರಬೇಕು. ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆ ಅಥವಾ ನಿವೇಶನ ಇರಬಾರದು ಜೊತೆಗೆ ಬೇರೆ ಯಾವುದೇ ಯೋಜನೆ ಅಥವಾ ಇಲಾಖೆಯಿಂದ ವಸತಿ ಅಥವಾ ನಿವೇಶನ ಸೌಲಭ್ಯ ಪಡೆದಿರಬಾರದು.

ಅರ್ಹ ಫಲಾನುಭವಿಗಳು ಪಡಿತರ ಚೀಟಿ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರ ಸೇರಿದಂತೆ ಇನ್ನಿತರೆ ಅಗತ್ಯ ದಾಖಲೆಗಳೊಂದಿಗೆ ನಿಗದಿತ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನಸಿಕ ಆರೋಗ್ಯ ಸಂಪನ್ಮೂಲ ವ್ಯಕ್ತಿಗಳಿಂದ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 24 (ಕರ್ನಾಟಕ ವಾರ್ತೆ): ಸಮಗ್ರ ಶಿಕ್ಷಣ ಕರ್ನಾಟಕ ರಾಯಚೂರು ವತಿಯಿಂದ 2026-27ನೇ ಸಾಲಿಗೆ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಪ್ರೌಢ ಹಾಗೂ ಪದವಿ ಪೂರ್ವ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿರುವ ಮಾನಸಿಕ ಆರೋಗ್ಯ ಸಂಬಧಿತ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಜಿಲ್ಲೆಯ 05 ಬ್ಲಾಕ್‌ಗಳಿಗೆ ಪ್ರತಿ ಬ್ಲಾಕ್‌ಗೆ ಒಬ್ಬರಂತೆ ಮಾನಸಿಕ ಆರೋಗ್ಯ ಶೈಕ್ಷಣಿಕ ಸಂಪನ್ಮೂಲ ವ್ಯಕ್ತಿ ಸಮಾಲೋಚಕರನ್ನು ತಾತ್ಕಾಲಿಕವಾಗಿ ನೇಮಕಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು 06 ತಿಂಗಳ ಅಥವಾ ಫೆಬ್ರವರಿ-2027 ಮಾಹೆವರೆಗಿನ ಅವಧಿಗೆ ಬ್ಲಾಕ್‌ಗಳಲ್ಲಿ ಕಾರ್ಯನಿರ್ವಹಿಸಲು ಮತ್ತು ವಿದ್ಯಾರ್ಹತೆ ಮನೋವಿಜ್ಞಾನ, ಕ್ಲಿನಿಕಲ್ ಮನೋವಿಜ್ಞಾನ, ಕೌನ್ಸಿಲಿಂಕ್ ಮನೋವಿಜ್ಞಾನ ಅಥವಾ ಸಂಬಧಿತ ವಿಷಯಗಳಲ್ಲಿ ಎಂ ಎ/ ಎಂ ಎಸ್‌ಸಿ ಪದವಿಯನ್ನು ಹೊಂದಿರಬೇಕು. ಶಾಲೆ ಅಥವಾ ಸಮುದಾಯ ಮಾನಸಿಕ ಆರೋಗ್ಯ ಕ್ಷೇತ್ರದಲ್ಲಿ ಕನಿಷ್ಠ ಒಂದು ವರ್ಷದ ಅನುಭವ ಹಾಗೂ ಕನ್ನಡ, ಇಂಗ್ಲಿಷ್ ಮತ್ತು ಮೂಲಭೂತ ಕಂಪ್ಯೂಟರ್ ಜ್ಞಾನ ಹೊಂದಿರಬೇಕು ಮತ್ತು ವಯೋಮಿತಿ 26 ರಿಂದ 42 ವರ್ಷದ ಒಳಗಿರಬೇಕು. ಆಸಕ್ತರು ಅರ್ಜಿಯನ್ನು ಈ ಕಛೇರಿಯಲ್ಲಿ ಪಡೆದು ಸ್ವ-ವಿವರದೊಂದಿಗೆ ದಿನಾಂಕ: 05-10-2026 ರ ಕಚೇರಿ ಅವಧಿಯ ಒಳಗಾಗಿ ಉಪನಿರ್ದೇಶಕರು ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿ ಸಮಗ್ರ ಶಿಕ್ಷಣ ಕರ್ನಾಟಕ ಕೊಠಡಿ. ಸಂಖ್ಯೆ ಸಿ-11 ಸಿ-12 ಬ್ಲಾಕ್ ನೆಲಮಹಡಿ, ನೂತನ ಜಿಲ್ಲಾಡಳಿತ ಭವನ, ಯಕ್ಲಾಸಪೂರ ರಾಯಚೂರು-584104 ಇಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಉಪನಿರ್ದೇಶಕರು ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K